ವಿಜಯಪುರ | ಸಂಪುಟ 04 | ಸಂಚಿಕೆ 160 | ಪುಟ 04 | ₹ 3.00

https://udayarashminews.com

udayarashmi 90088 88340

# ಉದಯ ರಶ್ಮಿ

Udayarashmi Kannada Daily

ಜನಪರ-ಜೀವಪರ

ಕನ್ನಡ ದಿನಪತ್ರಿಕೆ

ಸಂಪಾದಕ : ಇಂದುಶೇಖರ ಮಣೂರ

Editor: Indushekhar Manur

editor.udayarashmi@gmail.com | RNI NO: KARKAN/2023/86203 | ರವಿವಾರ, ಆಗಸ್ಟ್, 16, 2026



"ರೂ.8 ಸಾವಿರ ಕೋಟಿ ಸಿಎಸ್ ಆರ್ ಅನುದಾನ ದುರ್ಬಳಕೆಯಾಗುತ್ತಿದೆ. ರಾಜ್ಯದ ಪ್ರತಿಯೊಬ್ಬರಿಗೂ ಒಳ್ಳೆಯ ಶಿಕ್ಷಣ, ಉದ್ಯೋಗ ವ್ಯವಸ್ಥೆ ಮಾಡುವ ಗುರಿಯೊಂದಿಗೆ, ಈ ಅನುದಾನ ಸದ್ಬಳಕೆ ಮಾಡುವ ಉದ್ದೇಶದಿಂದ ಹೊಸ ಸಿಎಸ್‌ಆರ್ ಯೋಜನೆ ಜಾರಿ ಮಾಡಲು ಸರ್ಕಾರ ಮುಂದಾಗಿದೆ"

■ ಡಿ.ಕೆ.ಶಿವಕುಮಾರ್
ಮುಖ್ಯಮಂತ್ರಿ

# ದೇಶಕ್ಕೆ ಮಾದರಿಯಾದ ಪಂಚಗ್ಯಾರಂಟಿ ಯೋಜನೆಗಳು

## ವಿಜಯಪುರ ಜಿಲ್ಲೆಯಲ್ಲಿ ಬರ ಪರಿಸ್ಥಿತಿ ಎದುರಿಸಲು ಜಿಲ್ಲಾಡಳಿತ ಸನ್ನದ್ಧ | ರಾಷ್ಟ್ರ ಧ್ವಜಾರೋಹಣ ನೆರವೇರಿಸಿದ ಜಿಲ್ಲಾ ಉಸ್ತುವಾರಿ ಸಚಿವ ಡಾ.ಎಂ.ಬಿ. ಪಾಟೀಲ ಅಭಿಮತ

■ ಉದಯರಶ್ಮಿ ದಿನಪತ್ರಿಕೆ

ವಿಜಯಪುರ: ಸತತ ಮೂರು ವರ್ಷಗಳ ಕಾಲ ದೇಶಾದ್ಯಂತ ಸಂಚಲನ ಸೃಷ್ಟಿಸಿದ ಪಂಚ ಗ್ಯಾರಂಟಿ ಯೋಜನೆಗಳು ನಮ್ಮ ಸರ್ಕಾರಕ್ಕೆ ವಿಶೇಷ ಗೌರವ ತರುವುದರ ಜೊತೆಗೆ ಇಡೀ ದೇಶಕ್ಕೆ ಮಾದರಿಯಾಗಿ ನಿಂತಿವೆ. ನಮ್ಮ ಸರ್ಕಾರ ಜಾರಿಗೊಳಿಸಿದ ಈ ಯೋಜನೆಗಳನ್ನು ಇಂದಿನ ಮುಖ್ಯಮಂತ್ರಿ ಅವರು ಮುಂದುವರಿಸುವುದರ ಜೊತೆಗೆ ಅಧಿಕಾರ ವಹಿಸಿಕೊಂಡ 100 ದಿನಗಳಲ್ಲಿ 45 ವಿಶೇಷ ಕಾರ್ಯಕ್ರಮಗಳನ್ನು ಕಾರ್ಯಗತಗೊಳಿಸಲು ನಿರ್ಧ-ರಿಸಿದ್ದಾರೆ ಎಂದು ಬೃಹತ್ ಮತ್ತು ಮಧ್ಯಮ ಕೈಗಾರಿಕೆ, ಮೂಲಸೌಕರ್ಯ ಅಭಿವೃದ್ಧಿ ಹಾಗೂ ಜಿಲ್ಲಾ ಉಸ್ತುವಾರಿ ಸಚಿವರಾದ ಡಾ.ಎಂ.ಬಿ. ಪಾಟೀಲ ಅವರು ಹೇಳಿದರು.



### ಉದ್ಘಾಟನೆಗೆ ವಿಮಾನ ನಿಲ್ದಾಣ ಸಜ್ಜು

ವಿಜಯಪುರ ವಿಮಾನ ನಿಲ್ದಾಣವು ಉದ್ಘಾಟನೆಗೆ ಸಜ್ಜಾಗಿ ನಿಂತಿದೆ. ಒಟ್ಟು 727 ಎಕರೆ ವಿಸ್ತಾರದ ಈ ಯೋಜನೆಯು ಮೂಲದಲ್ಲಿ ಎಟಿಆರ್-72 ಮಾದರಿಯ ವಿಮಾನ ನಿಲ್ದಾಣದ ಸ್ವರೂಪವನ್ನು ಹೊಂದಿತ್ತಷ್ಟೆ. ನಮ್ಮ ಸರಕಾರ ಬಂದ ಮೇಲೆ ಸಾಕಷ್ಟು ಕೆಲಸಗಳಾಗಿವೆ. ಮುಖ್ಯವಾಗಿ ವಿಎಫ್‌ಆರ್ (ಹಗಲಿನ ದೃಶ್ಯ ಆಧಾರಿತ ಹಾರಾಟ ನಿಯಮಗಳು)ಗೆ ಸಂಬಂಧಿಸಿದ ಎಲ್ಲಾ ಕಾಮಗಾರಿಗಳನ್ನೂ 2025ರ ಮೇ ತಿಂಗಳಲ್ಲೇ ಮುಗಿಸಲಾಗಿದೆ. ಜತೆಗೆ 24.50 ಕೋಟಿ ರೂ. ವೆಚ್ಚದಲ್ಲಿ ಎರಡು ಅಗ್ನಿಶಾಮಕ ವಾಹನ ಖರೀದಿಸಲಾಗಿದೆ. ವಿಮಾನ ನಿಲ್ದಾಣದ ಭದ್ರತೆ ಮತ್ತು ಸುರಕ್ಷತೆಗೆಂದು 2.76 ಕೋಟಿ ರೂ. ವೆಚ್ಚದಲ್ಲಿ ಬಾಂಬ್ ಪತ್ತೆ ಮತ್ತು



### 1.96 ಲಕ್ಷ ಉದ್ಯೋಗ ಸೃಷ್ಟಿ

ಕೈಗಾರಿಕೆ ಮತ್ತು ವಾಣಿಜ್ಯ ಇಲಾಖೆಯಡಿ ಆಗಸ್ಟ್-2025 ರಿಂದ ಜುಲೈ-2026 ರ ವರೆಗಿನ ಅವಧಿಯಲ್ಲಿ ಒಟ್ಟು 16,440 ಅತೀ ಸಣ್ಣ, ಸಣ್ಣ ಮತ್ತು ಮಧ್ಯಮ ಕೈಗಾರಿಕೆಗಳು ಆನ್‌ಲೈನ್ ಮೂಲಕ ಉದ್ಯಮ ನೋಂದಣಿ ಪ್ರಮಾಣ ಪತ್ರ ಪಡೆದಿರುತ್ತವೆ. ಇದರಲ್ಲಿ 42 ಕೋಟಿ 92 ಲಕ್ಷ ಬಂಡವಾಳ ಹೂಡಿಕೆಯಾಗಿದ್ದು, 1 ಲಕ್ಷ 69 ಸಾವಿರ ಉದ್ಯೋಗ ಅವಕಾಶಗಳು ಸೃಷ್ಟಿಯಾಗಿರುತ್ತವೆ ಎಂದರು.

ನಗರದ ಡಾ.ಬಿ.ಆರ್.ಅಂಬೇಡ್ಕರ್ ಕ್ರೀಡಾಂಗಣದಲ್ಲಿ ಸ್ವಾತಂತ್ರ್ಯೋತ್ಸವ ದಿನಾಚರಣೆ ಅಂಗವಾಗಿ ರಾಷ್ಟ್ರಧ್ವಜಾರೋಹಣ ನೆರವೇರಿಸಿ, ಆಕರ್ಷಕ ಪಥಸಂಚಲನ ವೀಕ್ಷಿಸಿ, ಸಾರ್ವಜನಿಕರನ್ನುದ್ದೇಶಿಸಿ ಅವರು ಮಾತನಾಡಿದರು.

ದೇಶದ ಸ್ವಾತಂತ್ರ್ಯಕ್ಕಾಗಿ ಜಿಲ್ಲೆ ಸೇರಿದಂತೆ ದೇಶವ್ಯಾಪಿ ತಮ್ಮ ಜೀವದ ಹಂಗು ತೊರೆದು, ದೇಶಕ್ಕಾಗಿ ಪ್ರಾಣ ತೆತ್ತ ಕೆಚ್ಚೆದೆಯ ಹೋರಾಟ ಮಾಡಿದವರ ಹೆಸರನ್ನು ಸ್ಮರಿಸಿದ ಸಚಿವರು, ದೇಶಕ್ಕೆ ಸ್ವಾತಂತ್ರ್ಯಸಿಕ್ಕ ಈ ದಿನವನ್ನು ರಾಷ್ಟ್ರೀಯ ಐಕ್ಯತೆ ಬಲಪಡಿಸಲು ಹಾಗೂ ಪ್ರಜಾಪ್ರಭುತ್ವದ ಮೌಲ್ಯಗಳನ್ನು ಎತ್ತಿ ಹಿಡಿಯುವ ದಿನವಾಗಿದೆ ಎಂದು ಹೇಳಿದರು. ಭಾರತಾಂಬೆಯ ಅಭಿವೃದ್ಧಿಗೆ ಶ್ರಮಿಸಿದ ಸಮಸ್ತರೆಲ್ಲರ ಸಾತ್ವಿಕ ಪರಂಪರೆ ಮುಂದುವರೆಸಿಕೊಂಡು ಹೋಗಲು ನಾವೆಲ್ಲರೂ ಜಾತ್ಯಾತೀತ, ಧರ್ಮಾತೀತ ಮತ್ತು ಸೈದ್ಧಾಂತಿ-ಕವಾಗಿ, ಏಕತೆಯಿಂದ ಶ್ರಮಿಸುತ್ತ, ರಾಷ್ಟ್ರವನ್ನು ನಿರಂತರವಾಗಿ ಅಭಿವೃದ್ಧಿಯ ಪಥದಲ್ಲಿ ಮುನ್ನಡೆಸಿಕೊಂಡು ಹೋಗಲು ಕಂಕಣಬದ್ಧರಾಗೋಣ ಎಂದು ಸಂಕಲ್ಪಿಸಿ ಪ್ರತಿಜ್ಞೆಗೈಯೋಣ ಎಂದು ಸಚಿವರು ಸ್ವಾತಂತ್ರ್ಯೋತ್ಸವದ ಸಂದೇಶ ಸಾರಿದರು.

ಒಂದು ಹೆಕ್ಟೇರ್ ವರೆಗಿನ ಜಮೀನು ಹೊಂದಿರುವ ರೈತರಿಗೆ ಕೃಷಿ ಯಂತ್ರೋಪಕರಣಗಳ ಬಾಡಿಗೆ ಮೊತ್ತದಲ್ಲಿ ಶೇ.50 ರಷ್ಟು ಸಬ್ಸಿಡಿ ನೀಡಲು ನಮ್ಮ ಸರ್ಕಾರ ನಿರ್ಧರಿಸಿದೆ ಎಂದರು.

ಯುವ ಕರ್ನಾಟಕ ನಿರ್ಮಾಣಕ್ಕೆ ಚಾಲನೆ ನೀಡುವುದು. ಭಾರತ್ ಜೋಡೋ ಯುವಕ ಸಂಘ ಮಿಷನ್, ಗ್ರಾಮಪಂಚಾಯತ್ ವ್ಯಾಪ್ತಿಯಲ್ಲಿ 6000, ನಗರ ಪ್ರದೇಶಗಳಲ್ಲಿ 4000 ಸಂಘಗಳ ಸ್ಥಾಪಿಸುವುದು ಮತ್ತು ವಾರ್ಷಿಕ ತಲಾ 10 ಲಕ್ಷ ರೂ. ಅನುದಾನದಂತೆ ವಾರ್ಷಿಕ 1 ಸಾವಿರ ಕೋಟಿ ವೆಚ್ಚದಲ್ಲಿ ಯುವಕರಲ್ಲಿ ಆರೋಗ್ಯ, ಕೌಶಲ್ಯ, ಸಾಮಾಜಿಕ ಸಾಮರಸ್ಯ ಉತ್ತೇಜನ ನೀಡಲಾಗುವುದು ಎಂದರು.

ಬರ ಪರಿಸ್ಥಿತಿ ಎದುರಿಸಲು ಸಜ್ಜು: ರಾಜ್ಯದಲ್ಲಿ ಈ ವರ್ಷ ಭೀಕರ ಬರದ ಛಾಯೆ ಕಂಡು ಬಂದಿದ್ದು,



ವಿಜಯಪುರ ಜಿಲ್ಲೆಯಲ್ಲಿ ಮಳೆಯ ಪ್ರಮಾಣ ಅತ್ಯಂತ ಕಡಿಮೆಯಾಗಿದೆ. ವಾಡಿಕೆ ಮಳೆಯು 196.7 ಎಂ.ಎಂ ಇದ್ದು, ಇದುವರೆಗೂ ಒಟ್ಟು ಮಳೆ 163.5 ಎಂ.ಎಂ ಆಗಿದೆ. ಆಗಸ್ಟ್ ತಿಂಗಳಲ್ಲಿಯೇ ಶೇ.46 ರಷ್ಟು ಮಳೆ ಕೊರತೆ ಆಗಿದೆ. ಬರದಿಂದ ಸಂಭವಿಸಬಹುದಾದ ಸವಾಲುಗಳನ್ನು ಎದು-ರಿಸಲು ಜಿಲ್ಲಾಧಿಕಾರಿಗಳ ನೇತೃತ್ವದಲ್ಲಿ ಜಿಲ್ಲಾಡಳಿತ ಸಕಲ ಸಿದ್ಧತೆಗಳನ್ನು ಮಾಡಿಕೊಂಡಿದ್ದು, ಉಸ್ತುವಾರಿ ಸಚಿವನಾಗಿ ನಾನು ಜಿಲ್ಲೆಯ ಪ್ರತಿಯೊಂದು ಭಾಗಕ್ಕೆ ಕಾಲಕಾಲಕ್ಕೆ ಭೇಟಿ ನೀಡಿ, ವಸ್ತುಸ್ಥಿತಿಯನ್ನು ಪರಿಶೀಲಿಸುತ್ತಿದ್ದು, ಎಲ್ಲ ಅಗತ್ಯ ಕ್ರಮಗಳನ್ನು ಕೈಗೊಳ್ಳಲಾಗುತ್ತಿದೆ ಎಂದರು.

ಜಿಲ್ಲೆಯಲ್ಲಿ ವಾಡಿಕೆಗಿಂತ ಕಡಿಮೆ ಮಳೆಯಾಗಿರುವ ಕಾರಣದಿಂದ ಜಿಲ್ಲೆಯ ಕೃಷ್ಣಾ ಮೇಲ್ದಂಡೆ ಯೋಜನೆ ಹಂತ-1, 2 & 3 ರ ಅಡಿಯ ಅಚ್ಚುಕಟ್ಟು ಪ್ರದೇಶದ ವ್ಯಾಪ್ತಿಯಲ್ಲಿ ಬರುವ ಕೆರೆಗಳಲ್ಲಿನ ನೀರಿನ ಪ್ರಮಾಣ ಗಣನೀಯ ಪ್ರಮಾಣದಲ್ಲಿ ಕಡಿಮೆಯಾಗಿದ್ದರಿಂದಹ ಕುಡಿಯುವ ನೀರಿನ ಸಮಸ್ಯೆಯನ್ನು ಬಗೆಹರಿಸುವ ಸಲುವಾಗಿ 175 ಕೆರೆ ಮತ್ತು ಬಾಂದಾರಗಳನ್ನು ತುಂಬಿಸಲು ಕಾಲುವೆ ಜಾಲಕ್ಕೆ ನೀರನ್ನು ಹರಿಸಲಾಗಿರುತ್ತದೆ ಎಂದರು. ಕನ್ನಡ ಮತ್ತು ಸಂಸ್ಕೃತಿ ಇಲಾಖೆ ವತಿಯಿಂದ ನೋಂದಾಯಿತ ಕಲಾವಿದ-ರಿಗೆ ಗುರುತಿನ ಚೀಟಿಗಳನ್ನು ವಿತರಿಸಲಾಯಿತು.

ವಿವಿಧ ಶಾಲಾ ವಿದ್ಯಾರ್ಥಿಗಳು ಸಾಂಸ್ಕೃತಿ ಕಾರ್ಯಕ್ರಮ ಪ್ರಸ್ತುತಪಡಿಸಿದರು.

### ವಿಜಯಪುರ ಮಹಾನಗರ ಪಾಲಿಕೆಗೆ ರೂ.150 ಕೋಟಿ ಹಂಚಿಕೆ

ವಿಜಯಪುರ ಮಹಾನಗರ ಪಾಲಿಕೆಗೆ ಮಹಾತ್ಮ ಗಾಂಧಿ ನಗರ ವಿಕಾಸ ಹಂತ-2 ಯೋಜನೆಯಡಿ ರೂ.150 ಕೋಟಿ ಹಂಚಿಕೆಯಾಗಿದ್ದು, ರಸ್ತೆ ಮತ್ತು ಪ್ರವಾಹ ಸಂಬಂಧಿತ ಮಳೆನೀರು ಚರಂಡಿ ಕಾಮಗಾರಿಗಳನ್ನು ಪ್ರಾರಂಭಿಸಲಾಗಿದೆ ಎಂದರು.


### ಶಾಶ್ವತ ಕುಡಿಯುವ ನೀರಿನ ಸಮಗ್ರ ಯೋಜನೆ

ಶಾಶ್ವತ ಕುಡಿಯುವ ನೀರಿನ ಸಮಗ್ರ ಯೋಜನೆಯನ್ನು 2 ಹಂತಗಳಲ್ಲಿ ಕೈಗೊಳ್ಳಲಾಗುತ್ತಿದ್ದು, ವಿಜಯಪುರ ಜಿಲ್ಲೆಯ 13 ತಾಲೂಕುಗಳ 211 ಗ್ರಾಮ ಪಂಚಾಯಿತಿಗಳಲ್ಲಿ ಹಾಗೂ 11 ನಗರ ಪ್ರದೇಶಗಳಲ್ಲಿ ವ್ಯವಸ್ಥೆ ಕಲ್ಪಿಸುವುದಕ್ಕಾಗಿ ಆಲಮಟ್ಟಿ ಮತ್ತು ನಾರಾಯಣಪೂರ ಜಲಾಶಯದ ಹಿನ್ನೀರನ್ನು ಶುದ್ಧೀಕರಿಸಿ ಪೂರೈಸಲು ಒಟ್ಟು 3059 ಕೋಟಿ ರೂಪಾಯಿಗಳನ್ನು ನಿಗದಿಪಡಿಸಿದ್ದು, ಇದುವರೆಗೆ 1994 ಕೋಟಿ ರೂಪಾಯಿಗಳ ವೆಚ್ಚ ಭರಿಸಲಾಗಿದೆ ಎಂದರು.

ಈ ಸಂದರ್ಭದಲ್ಲಿ ನಗರ ಶಾಸಕರಾದ ಬಸನಗೌಡ ಪಾಟೀಲ ಯತ್ನಾಳ, ಕರ್ನಾಟಕ ಕೌಶಲ್ಯಾಭಿವೃದ್ಧಿ ನಿಗಮದ ಅಧ್ಯಕ್ಷರಾದ ಶ್ರೀಮತಿ ಕಾಂತಾ ನಾಯಕ, ಮೇಯರ್ ಎಂ.ಎಸ್ ಕರಡಿ, ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರಾದ ಗಂಗಾಧರ ಸಂಬಣ್ಣಿ, ಜಿಲ್ಲಾ ಮಟ್ಟದ ಪಂಚ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿ ಅಧ್ಯಕ್ಷರಾದ ವಸಂತ ಹೊನಮೋಡೆ, ಉಪ ಮೇಯರ್ ಶ್ರೀಮತಿ ಸುಮಿತ್ರಾ ಜಾಧವ ಜಿಲ್ಲಾಧಿಕಾ-ರಿಗಳಾದ ಡಾ.ಆನಂದ ಕೆ., ಜಿಪಂ ಸಿಇಒ ರಿಷಿ ಆನಂದ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಲಕ್ಷ್ಮಣ ನಿಂಬರಗಿ ಸೇ-ರಿದಂತೆ ಜಿಲ್ಲಾ ಮಟ್ಟದ ಅಧಿಕಾರಿಗಳು ಉಪಸ್ಥಿತರಿದ್ದರು.

# ಆ.17ರಿಂದ ಗುರುದೇವ ಆಶ್ರಮದಲ್ಲಿ ಆಧ್ಯಾತ್ಮಿಕ ಪ್ರವಚನ

■ ಉದಯರಶ್ಮಿ ದಿನಪತ್ರಿಕೆ



**ಶ್ರಾವಣ ಮಾಸ ಮುಗಿಯುವವರೆಗೆ ಪ್ರತಿದಿನ ಬೆಳಿಗ್ಗೆ ಪ್ರವಚನ | ಭಕ್ತರಿಗೆ ನಿತ್ಯ ಪ್ರಸಾದ ವ್ಯವಸ್ಥೆ**

ಚಡಚಣ: ಕರ್ನಾಟಕ ಮಹಾರಾಷ್ಟ್ರ ಗಡಿ ಭಾಗದ ಬಾಲಗಾವ್, ಕಾತ್ರಾಳ, ಅಕ್ಕಲವಾಡಿ ಹಾಗೂ ಬೋರಗಿ ಗ್ರಾಮಗಳ ಮಧ್ಯಭಾಗದಲ್ಲಿರುವ ಗುರುದೇವ ಆಶ್ರಮದಲ್ಲಿ ಶ್ರಾವಣ ಮಾಸದ ಪ್ರಯುಕ್ತ ಪರಮಪೂಜ್ಯ ಡಾ. ಅಮೃತಾನಂದ ಸ್ವಾಮೀಜಿಯವರಿಂದ ಆಧ್ಯಾತ್ಮಿಕ ಪ್ರವಚನ ಕಾರ್ಯಕ್ರಮ ಆಯೋಜಿಸಲಾಗಿದೆ ಎಂದು ಗುರುದೇವ ಆಶ್ರಮ ಸೇವಾ ಸಮಿತಿ ಪ್ರಕಟಣೆಯಲ್ಲಿ ತಿಳಿಸಿದೆ.

ಪರಮಪೂಜ್ಯ ಜ್ಞಾನಯೋಗಿ ಶ್ರೀ ಸಿದ್ದೇಶ್ವರ ಮಹಾಸ್ವಾಮಿಗಳ ಕೃಪಾಶೀರ್ವಾದದಿಂದ ನಿರ್ಮಾಣಗೊಂಡಿರುವ ಗುರುದೇವ ಆಶ್ರಮವು ಈ ಭಾಗದ ಪ್ರಮುಖ ಆಧ್ಯಾತ್ಮಿಕ ಕೇಂದ್ರವಾಗಿ ಗುರುತಿಸಿಕೊಂಡಿದೆ. ಸಿದ್ದೇಶ್ವರ ಮಹಾಸ್ವಾಮಿಗಳು ಆಶ್ರಮದಲ್ಲಿ ಹಲವು ದಿನಗಳ ಕಾಲ ವಾಸ್ತವ್ಯವಿದ್ದು, ಭಕ್ತರಿಗೆ ಆಧ್ಯಾತ್ಮಿಕ ಜ್ಞಾನ, ಧ್ಯಾನ, ಸಂಸ್ಕಾರ ಹಾಗೂ ಜೀವನ ಮೌಲ್ಯಗಳ ಕುರಿತು ತಮ್ಮ ಪ್ರವಚನಗಳ ಮೂಲಕ ಅಮೂಲ್ಯ ಸಂದೇಶಗಳನ್ನು ನೀಡಿದ್ದರು.

# ಉರ್ದು ಶಾಲಾ ಶಿಕ್ಷಕರ ನೇಮಕಕ್ಕೆ ಉರ್ದು ಶಿಕ್ಷಕರ ಸಂಘ ಮನವಿ

■ ಉದಯರಶ್ಮಿ ದಿನಪತ್ರಿಕೆ



ವಿಜಯಪುರ: ರಾಜ್ಯ ಸರ್ಕಾರ 15,000 ಶಿಕ್ಷಕರ ನೇಮಕ ಮಾಡಿಕೊಳ್ಳುತ್ತಿದ್ದು, ಈ ಹುದ್ದೆಗಳಲ್ಲಿ ಒಂದು ಹುದ್ದೆಯೂ ಉರ್ದು ಮಾಧ್ಯಮದ ಹುದ್ದೆಗಳಿಗೆ ಪರಿಗಣಿಸಿರುವುದಿಲ್ಲ. ಇದರಿಂದಾಗಿ ವಿಜಯಪುರ ಜಿಲ್ಲೆ ಸೇರಿದಂತೆ ರಾಜ್ಯಾದ್ಯಂತ ಶಿಕ್ಷಕರ ಕೊರತೆಯಿಂದ ಬಳಲುತ್ತಿರುವ ಉರ್ದು ಮಾಧ್ಯಮದ ಶಾಲಾ ವಿದ್ಯಾರ್ಥಿಗಳ ಶೈಕ್ಷಣಿಕ ಪ್ರಗತಿ, ಗುಣಮಟ್ಟಕ್ಕೆ ಗಂಭೀರವಾದ ತೊಂದರೆ ಉಂಟಾಗುವ ಎಂದು ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ ಮೂಲಸೌಕರ್ಯ ಅಭಿವೃದ್ಧಿ ಸಚಿವ ಎಂ.ಬಿ.ಪಾಟೀಲ ಅವರಿಗೆ ಜಿಲ್ಲಾ ಉರ್ದು ಶಿಕ್ಷಕರ ಸಂಘದ ಜಿಲ್ಲಾಧ್ಯಕ್ಷ ಜುಬೇರ ಎಸ್. ಕೆರೂರ ಅವರು ಮನವಿ ಸಲ್ಲಿಸಿದರು.

ಮನವಿ ಸಲ್ಲಿಸಿ ಮಾತನಾಡಿದ ಜುಬೇರ ಕೆರೂರ, ರಾಜ್ಯಾದ್ಯಂತ ಎಲ್ಲ ಜಿಲ್ಲೆಗಳಲ್ಲಿ ಹೊರಡಿಸಿರುವ ಅಧಿಸೂಚನೆಯಲ್ಲಿ ಕೇವಲ ಕನ್ನಡ ಮತ್ತು ಆಂಗ್ಲ ಮಾಧ್ಯಮದ ವಿವಿಧ ವೃಂದದ ಹುದ್ದೆಗಳನ್ನು ಮಾತ್ರ ಭರ್ತಿ ಮಾಡಲು ಪರಿಗಣಿಸಲಾಗಿದೆ. ಜಿಲ್ಲೆಯಲ್ಲಿ ಬಹಳಷ್ಟು ಉರ್ದು ಮಾಧ್ಯಮದ ಶಾಲೆಗಳಲ್ಲಿ ಪಿ.ಎಸ್.ಟಿ, ಜಿ.ಪಿ.ಟಿ, ಎಚ್.ಎಸ್.ಟಿ, ಹಾಗೂ ಸಿ.ಎಸ್.ಟಿ ಶಿಕ್ಷಕರ ಕೊರತೆ ಇದ್ದು, ಆದರೆ ಸದರಿ ಸರ್ಕಾರಿ ಉರ್ದು ಶಾಲೆಗಳಲ್ಲಿ ಖಾಲಿ ಇರುವ ಹುದ್ದೆಗಳನ್ನು ನೇಮಕಾತಿಗಾಗಿ ಪರಿಗಣಿಸದೆ ಇರುವುದ-ರಿಂದ, ಸರ್ಕಾರಿ ಶಾಲೆಗಳನ್ನೇ ನಂಬಿರುವ ವಿದ್ಯಾರ್ಥಿಗಳ ಶೈಕ್ಷಣಿಕ ಪ್ರಗತಿಯಲ್ಲಿ ಗಣನೀಯವಾಗಿ ಕುಂಠಿತವಾಗುವ ಸಾಧ್ಯತೆಗಳು ಹೆಚ್ಚಿಸಿದೆ. ಅಲ್ಲದೆ ತಮ್ಮ ಮಕ್ಕಳ ಉಜ್ವಲ ಭವಿಷ್ಯಕ್ಕಾಗಿ ಸರ್ಕಾರಿ ಉರ್ದು ಶಾಲೆಗಳನ್ನೇ ನಂಬಿರುವ ಪಾಲಕರು ಗುಣಮಟ್ಟದ ಶಿಕ್ಷಣಕ್ಕಾಗಿ ಸರ್ಕಾರಿ ಉರ್ದು ಶಾಲೆಗಳ ಮೇಲೆ ಇಟ್ಟಿರುವ ನಂಬಿಕೆಯನ್ನು ಕಳೆದುಕೊಳ್ಳುವ ಸಾಧ್ಯತೆಗಳನ್ನು ಹೆಚ್ಚಿಸಿದೆ.

ಆದ್ದರಿಂದ ವಿಜಯಪುರ ಜಿಲ್ಲೆ ಸೇರಿದಂತೆ ರಾಜ್ಯಾದ್ಯಂತ ಎಲ್ಲ ಜಿಲ್ಲೆಗಳಿಂದ ಖಾಲಿ ಇರುವ ಸರ್ಕಾರಿ ಉರ್ದು ಪಿ.ಎಸ್.ಟಿ, ಜಿ.ಪಿ.ಟಿ,ಎಚ್.ಎಸ್.ಟಿ, ಹಾಗೂ ಸಿ.ಎಸ್.ಟಿ ಶಿಕ್ಷಕರ ಮಾಹಿತಿಯನ್ನು ಇಲಾಖೆಯಿಂದ ನಿಖರವಾಗಿ ಪಡೆದು ಈ ಅಧಿಸೂಚನೆಯಲ್ಲಿ ಅಗತ್ಯ ಮಾರ್ಪಡುಗಳನ್ನು ಮಾಡಿ ಉರ್ದು ಮಾಧ್ಯಮದ ಶಾಲೆಗಳಿಗೆ ಉರ್ದು ಶಿಕ್ಷಕರ ನೇಮಕಾತಿಗೆ ಅವಕಾಶವನ್ನು ಒದಗಿಸಿಕೊಡಬೇಕೆಂದು ವಿನಂತಿಸಿದರು.

ಈ ಸಂದರ್ಭದಲ್ಲಿ ನೌಕರರ ಸಂಘದ ಜಿಲ್ಲಾಧ್ಯಕ್ಷ ಸುರೇಶ ಶಡಶ್ಯಾಳ, ಬಸೀರ್ ನದಾಫ್, ಜಮೀರ ನಾಗರಬಾವಿ, ಲತೀಪ್ ಇದ್ದರು.

**ಶರಣಜ್ಯೋತಿ ವಿದ್ಯಾ ಸಂಸ್ಥೆಯ ಗ್ರಾಮೀಣ ಬಾಲಕಿಯರ ವಸತಿ ನಿಲಯದಲ್ಲಿ ಸಂಭ್ರಮದ ಸ್ವಾತಂತ್ರ್ಯ ದಿನಾಚರಣೆ | ಅಧ್ಯಕ್ಷ ಮಲ್ಲಿಕಾರ್ಜುನ ದೇವನಗಾಂವ ಸಲಹೆ**

# ಸ್ವಾತಂತ್ರ್ಯ ಹೋರಾಟಗಾರರ ತ್ಯಾಗ-ಬಲಿದಾನ ಸದಾ ಸ್ಮರಿಸಬೇಕು



■ ಉದಯರಶ್ಮಿ ದಿನಪತ್ರಿಕೆ

ವಿಜಯಪುರ: ನಗರದ ಕೀರ್ತಿ ನಗರದಲ್ಲಿರುವ ಶ್ರೀ ಶರಣಜ್ಯೋತಿ ವಿದ್ಯಾ ಸಂಸ್ಥೆಯ ಗ್ರಾಮೀಣ ಬಾಲಕಿಯರ ವಸತಿ ನಿಲಯದಲ್ಲಿ 80ನೇ ಸ್ವಾತಂತ್ರ್ಯೋತ್ಸವ ದಿನಾಚರಣೆ ಸಮಾರಂಭವನ್ನು ಅರ್ಥಪೂರ್ಣವಾಗಿ ಆಚರಿಸಲಾಯಿತು.

ರಾಷ್ಟ್ರಧ್ವಜಾರೋಹಣ ನೆರವೇ-ರಿಸಿದ ಶರಣಜ್ಯೋತಿ ವಿದ್ಯಾ ಸಂಸ್ಥೆಯ ಅಧ್ಯಕ್ಷ ಮಲ್ಲಿಕಾರ್ಜುನ ದೇವನಗಾಂವ ಮಾತನಾಡಿ, ದೇಶಕ್ಕೆ ಸ್ವಾತಂತ್ರ್ಯ ತಂದುಕೊಟ್ಟ ಮಹನೀಯರ ತ್ಯಾಗ ಮತ್ತು ಬಲಿದಾನವನ್ನು ಪ್ರತಿಯೊಬ್ಬರೂ ಸ್ಮರಿಸಬೇಕು. ದೇಶದ ಐಕ್ಯತೆ ಮತ್ತು ಸಾರ್ವಭೌಮತೆ ಕಾಪಾಡಲು ವಿದ್ಯಾರ್ಥಿಗಳು ಈ ದಿನ ಪಣ ತೊಡಬೇಕು ಎಂದು ಕರೆ ನೀಡಿದರು.

ವಸತಿ ನಿಲಯದ ಅಧೀಕ್ಷಕಿ ವಿಜಯಲಕ್ಷ್ಮಿ ಎಂ ದೇವನಗಾಂವ ಅವರು ಮಹಾತ್ಮ ಗಾಂಧೀಜಿ ಮತ್ತು ಡಾ. ಬಿ.ಆರ್.ಅಂಬೇಡ್ಕರ್ ಭಾವಚಿತ್ರಗಳಿಗೆ ಪೂಜೆ ನೆರವೇರಿಸಿದರು.

ಸಮಾರಂಭದಲ್ಲಿ ವಸತಿ ನಿಲಯದ ಬಾಲಕಿಂ-ಯರು ಹಾಗೂ ಸಿಬ್ಬಂದಿ ಪಾಲ್ಗೊಂಡಿದ್ದರು.

# ಗಡಿ ಗ್ರಾಮಗಳ ಅಭಿವೃದ್ಧಿಗೆ ಆದ್ಯತೆ : ಸಚಿವ ಎಂ.ಬಿ.ಪಾಟೀಲ

■ ಉದಯರಶ್ಮಿ ದಿನಪತ್ರಿಕೆ

ವಿಜಯಪುರ: ಗಡಿ ಗ್ರಾಮಗಳ ಅಭಿವೃದ್ಧಿಗೆ ಆದ-್ಯತೆ ನೀಡಲಾಗುತ್ತಿದೆ ಎಂದು ಕೈಗಾರಿಕೆ, ಮೂಲಸೌಲಭ್ಯ ಅಭಿವೃದ್ಧಿ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಎಂ.ಬಿ.ಪಾಟೀಲ ಹೇಳಿದ್ದಾರೆ.

ಶನಿವಾರ ತಿಕೋಟಾ ತಾಲೂಕಿನ ಯತ್ನಾಳ ಗ್ರಾಮದಲ್ಲಿ ರೂ. 5 ಕೋ. ರೂ. ವೆಚ್ಚದಲ್ಲಿ ಲೋಕೋಪಯೋಗಿ ಇಲಾಖೆಯಿಂದ ಯತ್ನಾಳ-ಜಾಲಗೇರಿ ರಸ್ತೆ ಸುಧಾರಣೆ ಕಾಮಗಾರಿಗೆ ಚಾಲನೆ ನೀಡಿ ಅವರು ಮಾತನಾಡಿದರು.

ಯತ್ನಾಳ ಗ್ರಾಮದಿಂದ ಮಹಾರಾಷ್ಟ್ರದ ಗಡಿ ಭಾಗದ ವರೆಗಿನ ರಸ್ತೆ ಕಾಮಗಾರಿಗೆ ರೂ.5 ಕೋ. ಅನುದಾನ ಮಂಜೂರಾಗಿದ್ದು, ಸುಸಜ್ಜಿತ ರಸ್ತೆ ನಿರ್ಮಾಣವಾಗಲಿದೆ. ಇಟ್ಟಂಗಿಹಾಳದಿಂದ ಯತ್ನಾಳ ಗ್ರಾಮದವರೆಗೆ ಎಸ್.ಎಚ್.ಡಿ.ಪಿ ಯೋಜನೆಯಡಿ ರೂ. 25 ಕೋ. ವೆಚ್ಚದ ರಸ್ತೆ ಕಾಮಗಾರಿ ಟೆಂಡರ್ ಹಂತದಲ್ಲಿದೆ ಎಂದು ತಿಳಿಸಿದ ಅವರು, ಗುಣಮಟ್ಟದ ರಸ್ತೆ ನಿರ್ಮಿಸುವಂತೆ ಗುತ್ತಿಗೆದಾರರು ಮತ್ತು ಅಧಿಕಾರಿಗಳಿಗೆ ಖಡಕ್ಕಾಗಿ ಸೂಚನೆ ನೀಡಿದರು.

ಗಡಿ ಭಾಗದ ಜಮೀನುಗಳಿಗೆ ಸಮರ್ಪಕ ನೀರು ಒದಗಿಸಲು ಕ್ರಮ ಕೈಗೊಳ್ಳಲಾಗುವುದು. ಇದು ಗಡಿಯ ಕೊನೆ ಭಾಗವಾಗಿರುವುದರಿಂದ ನೀರಿಗೆ ಅಡೆತಡೆಯಾಗುವುದು ಸಹಜ. ಮೇಲ್ಭಾಗ ಮತ್ತು ಕೆಳ ಭಾಗದ ರೈತರು ಸಹಕಾರದಿಂದ ನೀರನ್ನು ಸದುಪಯೋಗ ಮಾಡಿಕೊಳ್ಳಬೇಕು. ಈ ಗ್ರಾಮಗಳಿಗೆ ಆಗಿರುವ ಅನ್ಯಾಯವನ್ನು ಮುಂದಿನ ದಿನಗಳಲ್ಲಿ ಸರಿ ಮಾಡಲಾಗುವುದು ಎಂದು ಸಚಿವರು ಭರವಸೆ ನೀಡಿದರು.




ಈ ಸಂದರ್ಭದಲ್ಲಿ ಮುಖಂಡರಾದ ರಾಜುಗೌಡ ಪಾಟೀಲ, ಸುರೇಶಗೌಡ ಪಾಟೀಲ, ಸುನೀಲಗೌಡ ಪಾಟೀಲ, ಸೋಮನಿಂಗ ಕೋರಿ, ಭೂತಾಳಸಿದ್ದ ಒಡೆಯರ, ಓಗೆಪ್ಪ ಗೋಪಣೆ, ರಾಜಶೇಖರ ಪವಾರ, ಗುರುಪಾದಗೌಡ ದಾಶ್ಯಾಳ, ಗೀತಾಂಜಲಿ ಪಾಟೀಲ, ರಾಘವೇಂದ್ರ ಕುಲಕರ್ಣಿ, ಈರನಗೌಡ ಬಿರಾದಾರ, ಲೋಕೋಪಯೋಗಿ ಇಲಾಖೆಯ ರವಿ ಪವಾರ ಸೇರಿದಂತೆ ಯತ್ನಾಳ ಜಾಲಗೇರಿ ಗ್ರಾಮಗಳ ಗ್ರಾಮಸ್ಥರು ಉಪಸ್ಥಿತರಿದ್ದರು.


# ಮುಸ್ಸಂಜೆ ಮಾತು ಮುದ್ದಾದ ಮೊದಲ ಮುತ್ತು

■ ಉದಯರಶ್ಮಿ ದಿನಪತ್ರಿಕೆ

**ಪ್ರೀತಿಯ ಸುಧಾ,**


ಹೇಳಿ ಕೇಳಿ ನೀನು ಮಾದಕ ಕಂಗಳ ಚೆಲುವೆ. ಬಲಗೆನ್ನೆಯ ಮೇಲಿರುವ ಗುಳಿಯೇ ನಿನಗೆ ಒಡವೆ. ನಿನ್ನಂತಹ ಮಂದಗಮನೆಯ ಮಂದಹಾಸ ನೋಡಲು ಸಿಗುವುದು ಅಪರೂಪವೆ. ನಿನ್ನ ರೂಪವೂ ಅಪರೂಪ. ಧೃಢತೆಯೂ ಅಪರೂಪ. ಅಂದದ ಮುಖಾರವಿಂದ, ನೀಳವಾದ ಕೇಶರಾಶಿ, ತಂಗಾಳಿಯೊಂದಿಗೆ ಆಟವಾಡುವ ದುಂಬಿಯಂತಹ ಮುಂಗುರುಳು, ಗುಲಾಬಿ ಬಣ್ಣದ ಅಧರಗಳಲ್ಲಿ ಅಚ್ಚಮಲ್ಲಿಗೆಯಂತಹ ಶುಭ್ರ ನಗು,ಚಂದನದ ಸುಗಂಧ ಬೀರುವ ಸುಂದರ ಯೌವ್ವನ ತುಂಬಿದ ಒಡಲು. ಅಂಗಾಂಗ ಸೌಂದರ್ಯವಂತೂ ಕವಿ ಕಾಳಿದಾಸನೂ ವರ್ಣಿಸಲಾಗದೆಂದು ಸೋಲುವನು. ಚೆಲುವಿನ ಸಾಗರ ನೀನು. ಬಿಂದು ನಾನು ಅನ್ನುತ್ತಿತ್ತು ಮನಸ್ಸು. ರಗಳೆ ರಂಪಗಳು ಗೊತ್ತಿಲ್ಲ. ಮಾನ ಸಮ್ಮಾನ ಉಳಿಸುವ ಬೆಳೆಸುವ ಕಲೆ ನಿನಗೆ ಚೆನ್ನಾಗಿ ಗೊತ್ತು. ಬೆಟ್ಟದಂತಹ ಅಡಚಣೆ ಬಂದರೂ ಸಲೀಸಾಗಿ ಬಿಡಿಸುವುದನ್ನು ಕರಗತ ಮಾಡಿಕೊಂಡಿರುವ ಚೆಲುವೆ. ಸೌಂದರ್ಯಸಾರದಂತೆ ಕಾಣುವವಳು. ಮನ್ಮಥ-'ನ ಹೂಬಾಣವನು ಸೀದಾ ಎದೆಗೆ ಬಿಟ್ಟವಳು. ನಿನ್ನ ನೆನೆಯುವುದು ಪುಳಕ ತರುವುದು. ನೀ ಮುಡಿಯದ ಹೂವಿನಲ್ಲಿ ಕಂಪಿಲ್ಲ. ನಾನೇನು ಸುರಸುಂದರಾಂಗನಲ್ಲ ನಿನ್ನ ಅನುರಾಗ ಬಯಸುವ ಪ್ರಿಯ ನಲ್ಲ. ನನ್ನ ನಿನ್ನ ಸಂಬಂಧ ಜಾತಿ ಮತ ಪಂಥ ಕೇಳದ ಅನುಬಂಧ. ಆ ದೈವ ಬೆಸೆದ ಬಂಧ.

ಮೊದಲ ಸಲ ನಿನ್ನ ನೋಡಿದ ದಿನ ಇನ್ನೂ ಕಣ್ಮುಂದಿದೆ. ಕಾಲೇಜಿನ ಉದ್ಯಾನವನದ ಹಸಿರು ಹಾಸಿನ ಮೇಲೆ ನೀನು ನಿನ್ನ ಗೆಳತಿಯರೊಂದಿಗೆ ಕುಳಿತು ಹರಟುತ್ತಿದ್ದೆ. ಇದ್ದಕ್ಕಿದ್ದಂತೆ ಫೋನ್ ರಿಂಗಣಿಸಿತು. ಮಾತನಾಡುತ್ತ ಎದ್ದು ನಿಂತು ಗೆಳತಿಯರಿಗೆ ಬೈ ಹೇಳಿ ನೀನು ಹೊರಟಿದ್ದೆ. ಆಗಲೇ ನನ್ನ ನಿನ್ನ ಮುಖಾಮುಖಿಯಾಯಿತು. ಅವಸರದಲ್ಲಿದ್ದರೂ ತಂಗಾಳಿಗೆ ತೂಗುತ್ತಿದ್ದ ಮರದ ನೆರಳಿನಲ್ಲಿ ನಿನ್ನತ್ತ ನೋಡುತ್ತ ನಿಂತಿದ್ದ ನನ್ನತ್ತ ನೋಡಿದೆ. ಆಗಲೇ ಇಬ್ಬರ ಕಣ್ಣುಗಳು ಮೊದಲ ಬಾರಿಗೆ ಸಂಧಿಸಿದವು. ನನ್ನ ಆಪ್ತ ಗೆಳೆಯರ ಪ್ರಕಾರ ನೀನು ಯಾವ ಹುಡುಗರನ್ನು ಕಣ್ಣೆತ್ತಿ ನೋಡುವವಳಲ್ಲ. ತುಟಿಗಳು ಮೌನವಾಗಿದ್ದರೂ ಕಣ್ಣುಗಳಲ್ಲೇ ಪ್ರೀತಿಯ ಭಾವ ವಿನಿಮಯ ನಡೆದುಹೋಯಿತು. ನಿನ್ನ ತುಟಿಯಂಚಿನ ಸಣ್ಣ ನಗು ನನ್ನ ಹೃದಯದ ಬಡಿತವನ್ನು ಏರಿಸಿತು. ನನ್ನ ಹೃದಯದಲ್ಲಿ ಪ್ರೀತಿಯ ಹೊಸ ಕಾವ್ಯವೊಂದು ಶುರುವಾಯಿತು. ಕಾಲೇಜಿನ ಗದ್ದಲದ ನಡುವೆಯೂ ನಮ್ಮಿಬ್ಬರಿಗೆ ಮಾತ್ರ ಸಮಯ ಸ್ತಬ್ಧವಾದಂತೆ ಭಾಸವಾಯಿತು. ಉಳಿದವರನ್ನು ಗಮನಿಸದಷ್ಟು ನಮ್ಮಿಬ್ಬರ ಗಮನ ಒಬ್ಬರ ಮೇಲೊಬ್ಬರ ಭಾವನೆಗಳಲ್ಲಿ ಮಿಂದೇಳುತ್ತಿತ್ತು. ನಾವು ಇನ್ಮುಂದೆ ಅಮರ ಪ್ರೇಮಿಗಳು ಎಂದು ಮನಸ್ಸುಗಳು ಹೇಳುತ್ತಿದ್ದವು. ಪಾರ್ಕಿನ ಈ ನೋಟ ನೋಡ ನೋಡುತ್ತಿದ್ದಂತೆ ಕಾಲೇಜಿನ ಕ್ಯಾಂಟೀನಿಗೆ ಯಾವಾಗ ಶಿಫ್ಟ್ ಆಯಿತೋ ತಿಳಿಯಲೇ ಇಲ್ಲ. ಬೈಟು ಚಹಾ ನೆಪದಲ್ಲಿ ಗಂಟೆಗಟ್ಟಲೇ ಹರಟೆ ನಡೆಯುತ್ತಿತ್ತು.





ಮಾತುಕತೆಯಲ್ಲಿ ಸ್ನೇಹ ಮುಂದುವರೆದರೂ ಪ್ರೀತಿಯನ್ನು ಅಭಿವ್ಯಕ್ತಿಸಲು ದಿನ ರಾತ್ರಿ ರಿಹರ್ಸಲ್ ನಡೆಸಿ ಇಂದು ಹೇಳಿಬಿಡಬೇಕೆಂದು ತಯಾರಾಗುತ್ತಿದ್ದೆ. ಆದರೆ ಧೈರ್ಯ ಸಾಲುತ್ತಲೇ ಇರಲಿಲ್ಲ. ಕೊನೆಗೊಂದು ದಿನ ಧೈರ್ಯವನ್ನೆಲ್ಲ ಒಟ್ಟುಗೂಡಿಸಿಕೊಂಡು ಕೈಯಲ್ಲಿದ್ದ ಕೆಂಗುಲಾಬಿಯನ್ನು ಬೆನ್ನ ಹಿಂದೆ ಹಿಡಿದು ನಿನ್ನ ಮುಂದೆ ನಿಂತಿದ್ದೆ. ನೀನು ಇನ್ನೇನು ಮಾತನಾಡಲು ಬಾಯಿ ತೆರೆಯಬೇಕೆನ್ನುವಷ್ಟರಲ್ಲಿ ಮೊಣಕಾಲೂರಿ, 'ನಿನ್ನ ಒಂದು ನಗುವಿಗೆ ನನ್ನ ಹೃದಯವನ್ನೇ ಕಳೆದುಕೊಂಡೆ. ಈ ಜೀವನದ ಹಾದಿಯಲ್ಲಿ ನನ್ನ ಜೊತೆಗಾತಿಯಾಗಿ ನನ್ನ ಜೊತೆ ಜೊತೆ ಹೆಜ್ಜೆ ಹಾಕುತ್ತಿಯಾ? ನಿನ್ನ ಹೃದಯದಲ್ಲಿ ಜೀವನಪೂರ್ತಿ ಇರೋಕೆ ಪುಟ್ಟ ಸ್ಥಾನ ಸಿಗುತ್ತಾ? ನಿನ್ನನ್ನ ಕಣ್ರೆಪ್ಪೆಯಲ್ಲಿಟ್ಟು ಕಾಯ್ತಿನಿ ಎನ್ನುತ್ತ ಕೆಂಗುಲಾಬಿಯನ್ನು ನೀಡಲು ಮುಂದಾದೆ.' 'ಕಾಲೇಜಿನ ಕೊನೆಯ ದಿನಗಳಲ್ಲಿ ನಿನ್ನೊಂದಿಗಿನ ಗೆಳೆತನ ನನ್ನ ಬದುಕಿಗೆ ಇಂಥ ಚೆಂದದ ತಿರುವು ನೀಡುತ್ತೆ ಅಂತ ಅಂದುಕೊಂಡಿರಲೇ ಇಲ್ಲ. ಕೇವಲ ಸಪ್ತಪದಿಯಲ್ಲಲ್ಲ ಬದುಕಿನ ಪ್ರತಿ ಹೆಜ್ಜೆಯೂ ನಿನ್ನನ್ನು ಹಿಂಬಾಲಿಸಲು ತಯಾರಿದೆ.' ಎಂದೆ ನೀನು. ಆಗ ನನಗೆ ಆಕಾಶ ಮೂರೇ ಗೇಣು ಉಳಿದಿತ್ತು. ಇಷ್ಟು ದಿನ ಕಾಲೇಜಿನ ಕ್ಯಾಂಪಸ್‌ನಲ್ಲಿ ನಿನ್ನತ್ತ ನೋಡುವುದು ಮಾತನಾಡುವುದೇ ಒಂದು ಭಾಗ್ಯವಾಗಿತ್ತು. ಆದರೆ ಇನ್ಮುಂದೆ ಈ ಹೊಸ ಜೀವನಕ್ಕೆ ಹೊಸ ಗಳಿಗೆಯಲ್ಲಿ ಒಂದಾಗಿ ಹಾರುವ ಜೋಡಿ ಹಕ್ಕಿಗಳು. ಈಗ ಈ ಜಾಗ ಒಂಥರ ಹೊಸ ಪ್ರಪಂಚ ತರ ಕಾಣಿಸುತ್ತಿದೆ. ನನ್ನ ಪ್ರೀತಿ ಒಂದು ಸುಂದರ ಕವಿತೆಯಾದರೆ, ನಿನ್ನೊಪ್ಪಿಗೆ ಕವಿತೆಗೆ ಸಿಕ್ಕ ಸುಮಧುರ ಸಂಗೀತವೆನ್ನುತ್ತ ಮೆಲ್ಲನೇ ಹಣೆಗೆ ಹೂ ಮುತ್ತನಿತ್ತೆ. ನೀನು ಸ್ವಲ್ಪ ದೂರ ಸರಿದು ನಾಳೆ ಸಂಜೆ ಸಿಗೋಣ ಊರಿನ ಹೊರವಲಯದಲ್ಲಿ ಎಂದು ಕೈ ಬೀಸಿ ನಡೆದೆ.





## ಪ್ರೇಮ ಬರಹ ಕೋಟಿ ತರಹ
### (ಪ್ರಣಯ ಪಕ್ಷಿಗಳ ಮೋಹಕ ಪದಗಳ ಗುಚ್ಛ)

ರಾತ್ರಿಯೆಲ್ಲ ಮರುದಿನದ ಸಂಜೆಯ ಕನಸು ಕಾಣುತ್ತ ಹಾಸಿಗೆ ಮೇಲೆ ಉರುಳಾಡಿದೆ. ಕಡುಬೇಸಿಗೆಗೆ ಬತ್ತಿಹೋಗಿದ್ದ ಸಣ್ಣ ಹಳ್ಳಗಳು ತೊರೆಗಳು ಜಿನುಗುತ್ತ ಹರಿಯುತ್ತಿದ್ದವು. ಪ್ರತಿಯೊಂದು ಮರಗಿಡಗಳೂ ಹೊಸ ಚಿಗುರೊಡೆದು ಭುವಿಗೆಲ್ಲ ಹಸಿರು ಹೊದಿಕೆಯಂತೆ ಕಾಣುತ್ತಿತ್ತು. ಅಡಿಕೆ ತೋಟಗಳು, ಬೆಟ್ಟಗುಡ್ಡಗಳು ದಟ್ಟ ಕಾಡೆಲ್ಲ ಕಡುಹಸಿರು ಬಣ್ಣಕ್ಕೆ ತಿರುಗಿತ್ತು. ಸೂರ್ಯನ ಕಿರಣಗಳು ಮತ್ತು ಮಂಜಿನ ನಡುವೆ ನಿರಂತರ ಕಣ್ಣಾಮುಚ್ಚಾಲೆ ಆಟ ನಡೆದಿತ್ತು. ಪ್ರಕೃತಿ ಸೌಂದರ್ಯದ ನಡುವೆ ನಡೆವಾಗ ಆ ದೇವರ ಅದ್ಭುತ ಜಾದೂ ನೀನು ಎಂದೆನಿಸುತ್ತಿತ್ತು. ಮಳೆಯ ಸಿಂಚನವಾಗುತ್ತಿದ್ದಂತೆಯೇ ಮೆಲ್ಲನೆ ಕೈಚಾಚಿ ನಿನ್ನ ಕೈ ಹಿಡಿದಿದ್ದೆ. ನನ್ನ ಒರಟು ಕೈಯಲ್ಲಿ ನಿನ್ನ ಮೃದುವಾದ ಕೈ ಬೆರೆತು ಹೋಗಿತ್ತು. ಮಳೆ ನಿಂತು ಹೋದ ಮೇಲೆ ಹನಿಯೊಂದು ಕಾಡಿದೆ ಎಂಬಂತೆ ಮಳೆ ನಿಂತರೂ ಹನಿಗಳು ಮರಗಳ ನಡುವೆ ತೊಟ್ಟಿಕ್ಕುತ್ತಲೇ ಇತ್ತು. ಕಪ್ಪೆಗಳ ಕರಕರೆ, ಹಂಚಿನ ಮನೆಯ ಮೇಲೆ ಬೀಳುವ ಹನಿಗಳು ಟಪ್ ಟಪ್ ಸದ್ದು ಕೇಳುತ್ತಿತ್ತು. ಕಿಟಕಿಯಾಚೆ ಕಣ್ಣು ಹಾಯಿಸಿದಾಗ ಜೋಡಿ ಹಕ್ಕಿಗಳೆರಡು ಮಳೆಯಿಂದ ತೊಯ್ದು ತೊಪ್ಪೆಯಾಗಿ ಮೈ ಬೆಚ್ಚಗೆ ಮಾಡಿಕೊಳ್ಳಲು ಹವಣಿಸುವ ಸನ್ನಿವೇಶ ಗಮನ ಸೆಳೆಯಿತು.

ನನಗರಿವಿಲ್ಲದೆ ನಿನ್ನ ಮೃದುವಾದ ಕೆನ್ನೆಯನ್ನು ನವಿರಾಗಿ ಸವ-ರಿದೆ. ಆ ಸ್ಪರ್ಶ ಭೂಮಿಗೆ ಬಿದ್ದ ಮೊದಲ ಮಳೆಹನಿಯಂತಿತ್ತು. ನೀನು ನಿನ್ನ ಪುಟ್ಟ ಕೈಗಳಿಂದ ನನ್ನ ಕೈಯನ್ನು ಮೃದುವಾಗಿ ಸವರಿದೆ.



ಮೆಲ್ಲನೆ ತಲೆ ಎತ್ತಿ ನಿನ್ನ ಕಣ್ಣುಗಳನ್ನು ನೋಡಿದೆ. 'ಐ ಲವ್ಯೂ ಎಂದು ಸುಮಧುರ ಧ್ವನಿಯಲ್ಲಿ ಕಿವಿಯಲ್ಲಿ ಪಿಸುಗುಟ್ಟಿದೆ.' ಕ್ಷಣಾರ್ಧದಲ್ಲಿ ನನ್ನ ಬಲವಾದ ತೋಳುಗಳಲ್ಲಿ ನೀನಿದ್ದೆ. ನನ್ನೆದೆಗೆ ಮುಖ ಒರಗಿಸಿ, ಹೃದಯದ ಬಡಿತ ಆಲಿಸುತ್ತಿದ್ದೆ. ಆ ಅನುಭವ ಇಬ್ಬರಿಗೂ ಹೊಸತು ಇಬ್ಬರಲ್ಲೂ ಒಂದು ಸಣ್ಣ ನಡುಕ. ಇಬ್ಬರ ಬೆರಳುಗಳ ನಡುವೆ ಹೊಸದೊಂದು ಪ್ರೇಮಕಾವ್ಯ ಸೃಷ್ಟಿಯಾಗುತ್ತಿದೆ ಎಂದೆನಿಸಿತು. ನಿನ್ನ ಆ ಅಪ್ಪುಗೆ ತಂಗಾಳಿಗೆ ಹೂವೊಂದು ಮೆಲ್ಲನೆ ವಾಲಿ, ರೆಂಬೆಯನ್ನು ಅಪ್ಪಿಕೊಂಡಂತಿತ್ತು. ನಿನ್ನ ಬೆಚ್ಚಗಿನ ಉಸಿರು ನನ್ನ ಮುಖಕ್ಕೆ ತಾಗುತ್ತಿತ್ತು. ಇಬ್ಬರ ಅಧರಗಳು ನಡುಗುತ್ತಿದ್ದವು. ನಿಧಾನವಾಗಿ ನಿನ್ನ ಮುಖವನ್ನು ಬೊಗಸೆಯಲ್ಲಿ ಎತ್ತಿ ಹಿಡಿದು. ಕಣ್ಣು ಮುಚ್ಚಿದೆ. ತುಟಿಗಳು ಮೆಲ್ಲ ಮೆಲ್ಲನೆ ಕಣ್ಣು ಹಣೆ ಮೇಲೆ ಮುದ್ರೆ ಒತ್ತತೊಡಗಿದವು. ಕೊನೆಗೆ ಅಧರಗಳು ಅಧರಗಳನ್ನು ಒಂದಕ್ಕೊಂದು ಅಪ್ಪಿಕೊಂಡವು. ಆ ಸವಿಯಲ್ಲಿ ಹಿತವಾದ ಅನುಭವವಿತ್ತು. ಕೆಲ ನಿಮಿಷದ ನಂತರ ಸವಿಮುತ್ತುಗಳಲ್ಲಿ ಕಳೆದುಹೋಗಿದ್ದು ಅರಿತು ಹರಿಣಿಯಂತೆ ನಾಚಿ ಓಡಿದೆ. ಇದೀಗ ವಿವಾಹದ ಬಂಧನದಲ್ಲಿ ಬಂಧಿಯಾಗಿದ್ದೇವೆ. ನಿನ್ನ ತುಟಿಯ ಮೇಲಿನ ಸವಿಜೇನಿನ ಖಜಾನೆ ನನ್ನದೇ. ಸವಿಜೇನಿನ ಸವಿ ಸವಿಯಲು ಬೆಚ್ಚನೆ ನಿನ್ನಪ್ಪುಗೆಯಲಿ ತೋಳ ತೆಕ್ಕೆಯಲಿ ಕೆನ್ನೆ ಕೆಂಪಾಗಿಸಲು ಕಾದಿರುವೆ ಬಂದು ಬಿಡು ಕೈಯಲ್ಲಿ ಹಾಲು ತುಂಬಿದ ಲೋಟ ಹಿಡಿದು. ಗೆಳತಿ, ಇನ್ಮೇಲಿನ ಸವಿಮುತ್ತುಗಳಲ್ಲಿ ಆಕರ್ಷಣೆ ಮಾತ್ರ ಇರುವುದಿಲ್ಲ. ಜೀವಮಾನ ಪೂರ್ತಿ ಕಣ್ಣಿನಂತೆ ಕಾಯುವ ಭರವಸೆಯೂ ಇರುತ್ತದೆ ಕಣೆ..

ಲೇಖನ
■ ಜಯಶ್ರೀ.ಜೆ. ಅಬ್ಬಿಗೇರಿ.
ಇಂಗ್ಲೀಷ್ ಉಪನ್ಯಾಸಕರು
ಬೆಳಗಾವಿ
ಮೊ: 9449234142



# ಸ್ವಾತಂತ್ರ್ಯ ಫಲಪ್ರದದಿಂದ ನಮಗೆ ನೆಮ್ಮದಿ ಜೀವನ : ಹೂಗಾರ



■ ಉದಯರಶ್ಮಿ ದಿನಪತ್ರಿಕೆ

ಆಲಮೇಲ: ಪಟ್ಟಣದ ವಿಶ್ವೇಶ್ವರ ಬಾಲಭಾರತಿ ಪ್ರಾಥಮಿಕ ಶಾಲೆಯಲ್ಲಿ ನಿವೃತ್ತ ಪ್ರಾಚಾರ್ಯ ಸಿಧ್ಧರಾಮ ಹೂಗಾರ ಧ್ವಜಾರೋಹಣ ನೆರವೇ-ರಿಸಿದರು.

ಈ ವೇಳೆ ಮಾತನಾಡಿದ ಅವರು, ಅನೇಕ ಹೋರಾಟಗಾರರ ತ್ಯಾಗ ಬಲಿದಾನದ ನಂತರ ನಮಗೆ ಸ್ವಾತಂತ್ರ್ಯ ದೊರಕಿತು. ಅಂತಹ ಪವಿತ್ರವಾದ ಸ್ವಾತಂತ್ರ್ಯವನ್ನು ಉಳಿಸಿಕೊಂಡು ಹೋಗಬೇಕಾಗಿರುವುದು ನಮ್ಮೆಲ್ಲರ ಹೊಣೆಗಾರಿಕೆ ಎಂದರು.

ಇದೇ ವೇಳೆ ಸಂಸ್ಥೆಯ ಅಧ್ಯಕ್ಷ ಶ್ರೀಶೈಲಪ್ಪ ಜೋಗೂರ, ಅಲೋಕ ಬಡದಾಳ ಮಾತನಾಡಿದರು.

ಈ ವೇಳೆ ಶಾಲೆಯ ವತಿಯಿಂದ ಬಿ.ಎಲ್.ಡಿ.ಇ.ಆಸ್ಪತ್ರೆಗೆ ದೇಹದಾನ ಮಾಡಿರುವ ಆಶಾ ಕಾರ್ಯಕರ್ತೆ, ಮಹಿಳಾ ಮುಖಂಡರು ಗಂಗೂಬಾಯಿ ಅಮಲಝರಿ ರವರಿಗೆ ಸನ್ಮಾನಿಸಲಾಯಿತು.

ಈ ವೇಳೆ ಸಂಸ್ಥೆಯ ಕಾರ್ಯದರ್ಶಿ ಪ್ರಶಾಂತ ಬಡದಾಳ, ಸದಸ್ಯರಾದ ಅಶೋಕ ವಾರದ,ಅಲೋಕ ಬಡದಾಳ, ಅಕ್ಷಯ ಕುಲಕರ್ಣಿ, ಮುಖ್ಯ ಶಿಕ್ಷಕ ಲಕ್ಷ್ಮೀಪುತ್ರ ಕಿರನಳ್ಳಿ, ಚಂದ್ರಕಾಂತ ದೇವರಮನಿ, ಪ್ರಶಾಂತ ಗಡದೆ, ಲಕ್ಷ್ಮೀಬಾಯಿ ಹಳೇಮನಿ, ಸುವರ್ಣ ಸಾರಂಗಮಠ, ಸೀತಾ ಆರೇಶಂಕರ, ಸರುಬಾಯಿ ಬಂಡಗರ, ಸುನೀತಾ ಗುಂಡದ, ಅಂಜಲಿ ಕನ್ನೊಳ್ಳಿ, ಐಶ್ವರ್ಯ ಬೇಪಾರಿ ಮುಂತಾದವರು ಇದ್ದರು

## ಸಹಿಷ್ಣುತೆ- ಸಾಮರಸ್ಯದಿಂದ ದೇಶದ ಐಕ್ಯತೆ ಸಾಧ್ಯ : ಡಾ. ಹಾದಿಮನಿ

■ ಉದಯರಶ್ಮಿ ದಿನಪತ್ರಿಕೆ

ಆಲಮೇಲ: ರಾಷ್ಟ್ರನಾಯಕರ ತನುಮನಧನಗಳ ತ್ಯಾಗ ಬಲಿದಾನದ ಪ್ರತೀಕವಾಗಿ ಸಿಕ್ಕಿರುವ ಸ್ವಾತಂತ್ರ್ಯವನ್ನು ಕಾಪಾಡಿಕೊಂಡು ದೇಶವನ್ನು ಅಭಿವೃದ್ಧಿ ಪಥದ ಕಡೆಗೆ ಕೊಂಡೊಯ್ಯುವುದು ಯುವಶಕ್ತಿಯ ಆಧ್ಯ ಕರ್ತವ್ಯವಾಗಿದೆ ಎಂದು ಡಾ ಸಮೀರ್ ಹಾದಿಮನಿ ಹೇಳಿದರು.

ಪಟ್ಟಣದ ನಿರ್ಮಲಾಲಯ ಆಂಗ್ಲ ಮಾಧ್ಯಮ ಶಾಲೆಯಲ್ಲಿ 80ನೇ ಸ್ವಾತಂತ್ರ್ಯ ದಿನಾಚರಣೆಯ ಪ್ರಯುಕ್ತ ಧ್ವಜಾರೋಹಣ ನೆರವೇರಿಸಿ ಅವರು ಮಾತನಾಡಿದರು.

ವಿಶ್ವದಲ್ಲಿಯೇ ಅತಿ ದೊಡ್ಡ ಪ್ರಜಾಪ್ರಭುತ್ವ ರಾಷ್ಟ್ರವಾಗಿರುವ ಭಾರತದಲ್ಲಿ ಸಹಿಷ್ಣುತೆ, ಸಾಮರಸ್ಯ ಅನಾದಿಕಾಲದಿಂದಲೂ ನೆಲೆಗೊಂಡಿದ್ದು, ಮಕ್ಕಳಲ್ಲಿ ಪ್ರಾಥಮಿಕ ಹಂತದಿಂದಲೇ ದೇಶ ಪ್ರೇಮವನ್ನು ಮೂಡಿಸಬೇಕು ಎಂದರು.

ಸಮಾರಂಭದ ಅಧ್ಯಕ್ಷತೆಯನ್ನು ಸಿಸ್ಟರ್ ಐರಿನ್ ವಹಿಸಿದ್ದರು. ನಿರ್ಮಲಾಲಯ ಸಮಾಜ ಸೇವಾ ಸಂಸ್ಥೆಯ ನಿರ್ದೇಶಕರಾದ ಸಿಸ್ಟರ್ ಒಲಿವಾ,



ಸಂಸ್ಥೆಯ ವ್ಯವಸ್ಥಾಪಕರಾದ ಸಿಸ್ಟರ್ ರೀವಿಂಗ್ ಹಾಗೂ ಸಿಸ್ಟರ್ ಸಂಜುಕ್ತಾ ಅವರು ಉಪಸ್ಥಿತರಿದ್ದರು.

ಶಾಲಾ ಸಿಬ್ಬಂದಿ, ವಿದ್ಯಾರ್ಥಿಗಳು, ಪಾಲಕರು ಪಾಲ್ಗೊಂಡಿದ್ದರು.

# ವಿಶ್ವ ಅಂಗಾಂಗ ದಾನ ದಿನದ ಅಂಗವಾಗಿ ಚಿತ್ರಕಲೆ ಸ್ಪರ್ಧೆ

■ ಉದಯರಶ್ಮಿ ದಿನಪತ್ರಿಕೆ

ವಿಜಯಪುರ: ವಿಶ್ವ ಅಂಗಾಂಗ ದಾನ ದಿನದ ಅಂಗವಾಗಿ ನಗರದ ಬಿ.ಎಲ್.ಡಿ.ಇ ಸಂಸ್ಥೆಯ ಎ.ವಿ. ಎಸ್ ಆಯುರ್ವೇದ ಮಹಾವಿದ್ಯಾಲಯ, ಆಸ್ಪತ್ರೆ ಮತ್ತು ಸಂಶೋಧನ ಕೇಂದ್ರದ ರಚನಾ ಶರೀರ ವಿಭಾಗದ ವತಿಯಿಂದ ಬುಧವಾರ ಅಂತರ್- ಮಹಾವಿದ್ಯಾಲಯದಲ್ಲಿ ಚಿತ್ರಕಲೆ ಸ್ಪರ್ಧೆಯನ್ನು ಆಯೋಜಿಸಲಾಗಿತ್ತು.

ಈ ಸ್ಪರ್ಧೆಯಲ್ಲಿ ಬಿ.ಎಲ್.ಡಿ.ಇ ಸಂಸ್ಥೆಯ ಎ.ವಿಎಸ್ ಆಯುರ್ವೇದ ಮಹಾವಿದ್ಯಾಲಯ, ಆರ್.ಕೆ. ಎಂ ಆಯುರ್ವೇದಿಕ್ ಮೆಡಿಕಲ್ ಕಾಲೇಜು, ಬಿ.ಎನ್.ಎಂ ನಾಗೂರ ಆಯುರ್ವೇದಿಕ್ ಮೆಡಿಕಲ್ ಕಾಲೇಜು ಹಾಗೂ ಲುಕ್ಮಾನ್ ಯುನಾನಿ ಮೆಡಿಕಲ್ ಕಾಲೇಜು ಸೇರಿದಂತೆ ನಾಲ್ಕು ಮಹಾವಿದ್ಯಾಲಯಗಳ ವಿದ್ಯಾರ್ಥಿಗಳ ಒಟ್ಟು 22 ತಂಡಗಳು ಪಾಲ್ಗೊಂಡಿದ್ದವು.



ಬಿ.ಎಲ್.ಡಿ.ಇ ಸಂಸ್ಥೆಯ ಎ.ವಿ.ಎಸ್ ಆಯುರ್ವೇದ ಕಾಲೇಜಿನ ಪ್ರಾಚಾರ್ಯ ಡಾ. ಅಶೋಕ ಪಾಟೀಲ, ಆಯೋಜನಾ ಕಾರ್ಯದರ್ಶಿ ಡಾ. ಶಿವಕುಮಾರ ಯರಗಲ, ಡಾ. ರಫಿಯಾಬಾನು ತಾಳಿಕೋಟಿ, ಸಹ-ಆಯೋಜನಾ ಕಾರ್ಯದರ್ಶಿ ಈ ಸಂದರ್ಭದಲ್ಲಿ ಉಪಸ್ಥಿತರಿದ್ದರು.

ಬಿ.ಎಲ್.ಡಿ.ಇ ಡೀಮ್ಡ್ ಟುಬಿ ಯೂನಿವರ್ಸಿಟಿಯ ರಚನಾ ಶರೀರ ವಿಭಾಗದ ಡಾ. ಆರ್. ಎಸ್. ಬುಲಗೌಡ ಹಾಗೂ ಡಾ. ಖುರೇಷಿ ಅವರು ತೀರ್ಪುಗಾರರಾಗಿ ಪಾಲ್ಗೊಂಡರು.

ಈ ಸಂದರ್ಭದಲ್ಲಿ ಮಾತನಾಡಿದ ಡಾ. ಆರ್. ಎಸ್. ಬುಲಗೌಡ, ದೇಹದ ಮೇಲೆ ಆಯಾ ಅಂಗಗಳನ್ನು ರಚಿಸುವದರ ಮೂಲಕ ವಿದ್ಯಾರ್ಥಿಗಳ ರಚನಾ ಶರೀರಶಾಸ್ತ್ರದ ಜ್ಞಾನ, ಸೃಜನಶೀಲತೆ, ತಂಡದ ಕಾರ್ಯಕ್ಷಮತೆ ಹಾಗೂ ಪ್ರಾಯೋಗಿಕ ಕಲಿಕೆಯನ್ನು ಉತ್ತೇಜಿಸುವುದು ಈ ಸ್ಪರ್ಧೆಯ ಮುಖ್ಯ ಉದ್ದೇಶವಾಗಿದೆ ಎಂದು ಹೇಳಿದರು.

ಈ ಸ್ಪರ್ಧೆಯ ವಿಜೇತರಿಗೆ ಬಹುಮಾನವನ್ನು ಮುಂದಿನ ಕಾರ್ಯಕ್ರಮದಲ್ಲಿ ಪ್ರಕಟಿಸಿ ಕೊಡಲಾಗುವುದು ಕಾಲೇಜಿನ ಮಾಧ್ಯಮ ಪ್ರಕಟಣೆಯಲ್ಲಿ ಮಾಹಿತಿ ನೀಡಲಾಗಿದೆ.

# ದೇಶದ ಸೈನಿಕರಿಂದ ಸ್ವಾತಂತ್ರ್ಯ ರಕ್ಷಣೆ :ಮೇಜರ್ ಗಿರಿಮಲ್ಲೇಶ

## ಎಕ್ಸಲಂಟ್ ವಿಜ್ಞಾನ ಪ.ಪೂ ಕಾಲೇಜಿನಲ್ಲಿ ಸಂಭ್ರಮದ ಸ್ವಾತಂತ್ರೋತ್ಸವ ಸಂಭ್ರಮಾಚರಣೆ

■ ಉದಯರಶ್ಮಿ ದಿನಪತ್ರಿಕೆ

ವಿಜಯಪುರ: ನಮ್ಮ ದೇಶಕ್ಕೆ ಸ್ವಾತಂತ್ರ್ಯ ಸಿಗುವುದಕ್ಕೆ ಎಷ್ಟು ಜನರು ಪ್ರಾಣ ತೆತ್ತಿದ್ದಾರೋ ಆ ಸ್ವಾತಂತ್ರವನ್ನು ಉಳಿಸಿಕೊಳ್ಳುವುದಕ್ಕಾಗಿ ವೀರ ಯೋಧರು ಸಹ ಪ್ರಾಣ ನೀಡಿದ್ದಾರೆ. ಈರ್ವರ ತ್ಯಾಗ ಹಾಗೂ ಬಲಿದಾನದ ಫಲವಾಗಿ ಇಂದು ಭಾರತದಲ್ಲಿ ನಾವೆಲ್ಲ ನೆಮ್ಮದಿಯಾಗಿ ಬದುಕುತ್ತಿದ್ದೇವೆ ಎಂದು ಭೂಸೇನೆಯ ನಿವೃತ್ತ ಸುಬೇದಾರ ಮೇಜರ್ ಗಿರಿಮಲ್ಲೇಶ ಬಿ.ಜಿ ಹೇಳಿದರು.

ನಗರದ ಎಕ್ಸಲಂಟ್ ವಿಜ್ಞಾನ ಪದವಿ ಪೂರ್ವ ಕಾಲೇಜಿನಲ್ಲಿ ಆಯೋಜಿಸಲಾಗಿದ್ದ 80 ನೇ ಸ್ವಾತಂತ್ರೋತ್ಸವದ ಧ್ವಜಾರೋಹಣ ನೆರವೇರಿಸಿ ಅವರು ಮಾತನಾಡಿದರು.

ಯುವಕರು ದೇಶದ ವಿಚಾರಕ್ಕೆ ಬಂದಾಗ ದೇಶವೇ ಮೊದಲು ಮಿಕ್ಕಿದ್ದೆಲ್ಲ ನಂತರ ಎನ್ನುವ ಮಟ್ಟದಲ್ಲಿ ದೇಶಭಕ್ತಿಯನ್ನು ಮೈಗೂಡಿಸಿಕೊಂಡು ನಡೆದಾಗ ಮಾತ್ರ ಜಗತ್ತಿನಲ್ಲಿಯೇ ಭಾರತ ಮತ್ತಷ್ಟು ಬಲಶಾಲಿ ರಾಷ್ಟ್ರವಾಗಿ ಹೊರ ಹೊಮ್ಮುತ್ತದೆ ಎಂದು ಹೇಳಿದರು.

ನಾನು ಸಹ ಹತ್ತಾರು ಆಪರೇಷನ್‌ಗಳಲ್ಲಿ ಭಾಗವಹಿಸಿ ಈ ದೇಶವನ್ನು ಕಾಯುವುದಕ್ಕಾಗಿ ಈ ದೇಶದ ಅಸ್ಮಿತೆಗಾಗಿ ಹೋರಾಟ ಮಾಡಿದ್ದು ಭಾರತ ದೇಶದಲ್ಲಿ ಜನಿಸಿದಕ್ಕೆ ಧನ್ಯವಾಯಿತು ಎನ್ನುವ ಭಾವ ನನ್ನಲ್ಲಿ ಮನೆ ಮಾಡಿದೆ ಎಂದು ಹೇಳಿದರು.

ಮುಖ್ಯ ಅತಿಥಿಗಳಾಗಿ ವಿಶ್ರಾಂತ ಪ್ರಾಧ್ಯಾಪಕ ಡಾ.ಜಿ.ಪಿ ಸಾಳೆ ಮಾತನಾಡಿ, ಭಾರತ ಮತ್ತೊಮ್ಮೆ ವಿಶ್ವಗುರುವಾಗುವ ನಿಟ್ಟಿನಲ್ಲಿ ಹೆಜ್ಜೆ ಹಾಕುತ್ತಿದೆ. ವಿಕಸಿತ ಭಾರತದ ಕನಸನ್ನು




ನನಸು ಮಾಡುವುದರ ಜೊತೆಗೆ ಜಾಗತಿಕ ಮಟ್ಟದಲ್ಲಿ ಭಾರತ ಇನ್ನೂ ಎತ್ತರೆತ್ತರಕ್ಕೆ ಬೆಳೆಯುವುದಕ್ಕೆ ನಮ್ಮ ಯುವಶಕ್ತಿ ಪ್ರಯತ್ನ ಮಾಡಬೇಕು ಎಂದು ಕರೆ ನೀಡಿದರು.

ಅಗ್ನಿವೀರ ಪರೀಕ್ಷೆಯಲ್ಲಿ ಉತ್ತೀರ್ಣಳಾಗಿ ಭಾರತೀಯ ವಾಯು ಪಡೆಯ ಸೇವೆಗೆ ನಿಯೋಜನೆಗೊಂಡ ವಿದ್ಯಾರ್ಥಿನಿ ಐಶ್ವರ್ಯ ಮದಭಾವಿ ಸನ್ಮಾನ ಸ್ವೀಕರಿಸಿ ಮಾತನಾಡಿದರು.

ಪ್ರಾಂಶುಪಾಲ ಮಂಜುನಾಥ ಜುನಗೊಂಡ, ವಿದ್ಯಾರ್ಥಿಗಳಾದ ರಫೀಕ್ ಮೋರಟಗಿ, ಅಪೇಕ್ಷಾ ಹಗ್ಗಿ, ಅಶ್ವಿನಿ ಮೋಟೇಕರ್ ಮಾತನಾಡಿದರು.

ಎಕ್ಸಲಂಟ್ ಸಮೂಹ ಶಿಕ್ಷಣ ಸಂಸ್ಥೆಗಳ ನಿರ್ದೇಶಕಿಂ-ಯರಾದ ಪುಷ್ಪಾ ಕೌಲಗಿ, ಶೈಕ್ಷಣಿಕ ಸಂಯೋಜಕ ಮಂಜುನಾಥ ತುಮ್ಮರಮಟ್ಟಿ ಉಪಸ್ಥಿತರಿದ್ದರು.

ವೈಶಾಲಿ ಪೂಜಾರಿ, ಸಿಂಧೂರಾಣಿ ಸ್ಥಾವರಮಠ ಪ್ರಾರ್ಥಿಸಿದರು. ಕನ್ನಡ ವಿಭಾಗದ ಮುಖ್ಯಸ್ಥ ಶರಣಗೌಡ ಪಾಟೀಲ ಸ್ವಾಗತಿಸಿದರು, ಆಂಗ್ಲ ವಿಭಾಗದ ಮುಖ್ಯಸ್ಥೆ ಶ್ರದ್ಧಾ ಜಾಧವ ನಿರೂಪಿಸಿ ವಂದಿಸಿದರು.

# ಭಾರತ್ ಜೋಡೋ ಯುವ ಸಂಘಗಳ ಸ್ಥಾಪನೆಗೆ ಅವಕಾಶ

■ ಉದಯರಶ್ಮಿ ದಿನಪತ್ರಿಕೆ

ವಿಜಯಪುರ: ರಾಜ್ಯ ಸರ್ಕಾರದ ಮಹತ್ವಾಕಾಂಕ್ಷಿ ಯೋಜನೆಯಾದ ಭಾರತ್ ಜೋಡೋ ಯುವ ಸಂಘಗಳನ್ನು ಗ್ರಾಮೀಣ ಹಾಗೂ ನಗರ ಪ್ರದೇಶಗಳಲ್ಲಿ ಸ್ಥಾಪಿಸುವ ಮೂಲಕ ಯುವಜನರಲ್ಲಿ ಕ್ರೀಡೆ, ಫಿಟ್‌ನೆಸ್, ಆರೋಗ್ಯಕರ ಜೀವನಶೈಲಿ ಹಾಗೂ ನಾಯಕತ್ವದ ಅವಕಾಶಗಳನ್ನು ಉತ್ತೇಜಿಸುವ ಉದ್ದೇಶ ಹೊಂದಲಾಗಿದೆ.

ಯೋಜನೆಯಡಿ ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ಸರಾಸರಿ 6,000 ಜನಸಂಖ್ಯೆಗೆ ಒಂದು ಸಂಘ, ನಗರ ವಾರ್ಡ್‌ಗಳ ವ್ಯಾಪ್ತಿಯಲ್ಲಿ ಸರಾಸರಿ 4,000 ಜನಸಂಖ್ಯೆಗೆ ಒಂದು ಸಂಘ ಸ್ಥಾಪಿಸಲು ಅವಕಾಶ ಕಲ್ಪಿಸಲಾಗಿದೆ. ಅದೇ ರೀತಿ, ಪ್ರತಿ ಪಟ್ಟಣ ಪಂಚಾಯಿತಿ (ಟಿ.ಪಿ.) ವ್ಯಾಪ್ತಿಯಲ್ಲಿ ಸರಾಸರಿ 4,000 ಜನಸಂಖ್ಯೆಗೆ, ಪಟ್ಟಣ ಪುರಸಭೆ (ಟಿ.ಎಂ.ಸಿ.) ವ್ಯಾಪ್ತಿಯಲ್ಲಿ 6,000 ಜನಸಂಖ್ಯೆಗೆ, ನಗರಸಭೆ (ಸಿ.ಎಂ.ಸಿ.) ವ್ಯಾಪ್ತಿಯಲ್ಲಿ 8,000 ಜನಸಂಖ್ಯೆಗೆ ಹಾಗೂ ಮಹಾನಗರ ಪಾಲಿಕೆ ಮತ್ತು ಜಿ.ಬಿ.ಎ. ವ್ಯಾಪ್ತಿಯಲ್ಲಿ ಸರಾಸರಿ 10,000 ಜನಸಂಖ್ಯೆಗೆ ಒಂದು ಭಾರತ್ ಜೋಡೋ ಯುವ ಸಂಘ ಸ್ಥಾಪಿಸಲು ಅವಕಾಶವಿದೆ.

ಜಿಲ್ಲೆಯಾದ್ಯಂತ ಒಟ್ಟು 10,000 ಭಾರತ ಜೋಡೋ ಯುವ ಸಂಘಗಳನ್ನು ಸ್ಥಾಪಿಸುವ ಗುರಿ ಹೊಂದಲಾಗಿದ್ದು, ಈ ಸಂಘಗಳ ಮೂಲಕ 50 ಲಕ್ಷಕ್ಕೂ ಅಧಿಕ ಯುವಜನರನ್ನು ಸಂಘಟಿಸುವ ಉದ್ದೇಶ ಹೊಂದಲಾಗಿದೆ. ಯುವಜನರಲ್ಲಿ ಕ್ರೀಡಾಸಕ್ತಿ ಬೆಳೆಸುವುದು, ದೈಹಿಕ ಕ್ಷಮತೆ ಹಾಗೂ ಆರೋಗ್ಯಕರ ಜೀವನಶೈಲಿಗೆ ಉತ್ತೇಜನ ನೀಡುವುದು ಮತ್ತು ನಾಯಕತ್ವದ ಗುಣಗಳನ್ನು ಬೆಳೆಸಲು ಸೂಕ್ತ ಅವಕಾಶ ಕಲ್ಪಿಸುವುದು ಯೋಜನೆಯ ಪ್ರಮುಖ ಉದ್ದೇಶಗಳಾಗಿವೆ.

ಪ್ರತಿ ಭಾರತ ಜೋಡೋ ಯುವ ಸಂಘಕ್ಕೆ ರೂ.10 ಲಕ್ಷಗಳ ಅನುದಾನ ಒದಗಿಸಲಾಗುವುದು. 16ರಿಂದ 35 ವರ್ಷದೊಳಗಿನ ಆಸಕ್ತ ಯುವಕ-ಯುವತಿಯರು ಸಂಘದ ಸದಸ್ಯತ್ವ ಪಡೆಯಬಹುದಾಗಿದೆ. ಸದಸ್ಯತ್ವ ಪಡೆಯಲು ಆಸಕ್ತರು bjys.karnataka.gov.in ಪೋರ್ಟಲ್ ಮೂಲಕ ಆಧಾರ್ ಕಾರ್ಡ್‌ನೊಂದಿಗೆ ಮೊಬೈಲ್ , ಕರ್ನಾಟಕ ಒನ್ ಹಾಗೂ ನಾಗರಿಕ ಸೇವಾ ಕೇಂದ್ರಗಳ ಮೂಲಕ ತಮ್ಮ ಹೆಸರನ್ನು ನೋಂದಾಯಿಸಿಕೊಳ್ಳಬಹುದು ಎಂದು ತಿಳಿಸಲಾಗಿದೆ.

ಹೆಚ್ಚಿನ ಮಾಹಿತಿಗಾಗಿ ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ (ಪಿಡಿಒ), ಪಟ್ಟಣ ಪಂಚಾಯಿತಿ ಹಾಗೂ ಪುರಸಭೆ ವ್ಯಾಪ್ತಿಯಲ್ಲಿ ಮುಖ್ಯಾಧಿಕಾರಿಗಳು, ತಾಲ್ಲೂಕು ಮಟ್ಟದಲ್ಲಿ ತಹಶೀಲ್ದಾರರು/ತಾಲ್ಲೂಕು ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿಗಳು ಹಾಗೂ ಜಿಲ್ಲಾಮಟ್ಟದಲ್ಲಿ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕರು, ಇವರನ್ನು ಸಂಪರ್ಕಿಸಬಹುದು ಎಂದು ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕರ ಪ್ರಕಟಣೆ ತಿಳಿಸಿದೆ.

# ಭಾರತ ನಕ್ಷೆಯ ಆಕಾರದಲ್ಲಿ ಅರಿಹಂತ ಶಾಲೆ ವಿದ್ಯಾರ್ಥಿಗಳು



■ ಉದಯರಶ್ಮಿ ದಿನಪತ್ರಿಕೆ


ವಿಜಯಪುರ: ನಗರದ ಸೋಲಾಪುರ ರಸ್ತೆಯಲ್ಲಿರುವ ಅರಿಹಂತ ಪೂರ್ವ ಪ್ರಾಥಮಿಕ ಹಾಗೂ ಪ್ರಾಥಮಿಕ ಶಾಲೆಯಲ್ಲಿ ನಡೆದ ಸ್ವಾತಂತ್ರ್ಯೋತ್ಸವ ಕಾರ್ಯಕ್ರಮದಲ್ಲಿ, ವಿದ್ಯಾರ್ಥಿಗಳು ಭಾರತದ ನಕ್ಷೆಯ ಆಕಾರದಲ್ಲಿ ಕುಳಿತುಕೊಂಡು ದೇಶಭಕ್ತಿಯ ಸಂದೇಶ ಸಾರಿ ಗಮನ ಸೆಳೆದರು.

# ಕೆಎಸ್‌ಎಂಸಿಎ ಸಂಸ್ಥೆಯಲ್ಲಿ ಸಂಭ್ರಮದ ಸ್ವಾತಂತ್ರ್ಯೋತ್ಸವ

■ ಉದಯರಶ್ಮಿ ದಿನಪತ್ರಿಕೆ

ವಿಜಯಪುರ: ಕರ್ನಾಟಕ ಸ್ಟೇಟ್ ಮಾರ್ಕೆಟಿಂಗ್ ಕಮ್ಯೂನಿಕೇಷನ್ ಅಂಡ್ ಅಡ್ವರ್ಟೈಸಿಂಗ್ ಲಿಮಿಟೆಡ್ (ಕೆಎಸ್-ಎಂಸಿಎ) ಸಂಸ್ಥೆಯಲ್ಲಿ ನಡೆದ 80ನೇ ಸ್ವಾತಂತ್ರ್ಯೋತ್ಸವ ಸಮಾರಂಭದಲ್ಲಿ ಕಂಪನಿಯ ವ್ಯವಸ್ಥಾಪಕ ನಿರ್ದೇಶಕರಾದ ಬಿ. ಆನಂದ್ ರವರು ಧ್ವಜಾರೋಹಣ ನೆರವೇರಿಸಿದರು.

ಈ ಸಂದರ್ಭದಲ್ಲಿ ಅಧಿಕಾರಿಗಳು ಮತ್ತು ನೌಕರರು ಉಪಸ್ಥಿತರಿದ್ದರು



# ಚನ್ನಮ್ಮನ ಕಿತ್ತೂರು: ಕಾಮಗಾರಿಗೆ ಭೂಮಿಪೂಜೆ



ಚನ್ನಮ್ಮನ ಕಿತ್ತೂರು: ಕೃಷಿಗೆ ಸಂಬಂಧಿಸಿದಂತೆ ಪ್ರತಿ ಗ್ರಾಮದಲ್ಲಿಯೂ ಮಾರಾಟ ಮಳಿಗೆಗಳು ನಿರ್ಮಿಸುವುದರಿಂದ ರೈತರಿಗೆ ಅನುಕೂಲವಾಗುತ್ತದೆ ಎಂದು ಕಾಂಗ್ರೆಸ್ ಮುಖಂಡ ಹಾಗೂ ಡಿಸಿಸಿ ಬ್ಯಾಂಕ ನಿರ್ದೇಶಕ ನಾನಾಸಾಹೇಬ ಪಾಟೀಲ ಅಭಿಪ್ರಾಯಪಟ್ಟರು.

ತಾಲೂಕಿನ ಬೈಲೂರ ಗ್ರಾಮದಲ್ಲಿ ಪಂಚಾಯತ ರಾಜ್ ಇಂಜೀಯರಿಂಗ್ ಇಲಾಖೆ 2025-26ನೇ ಸಾಲಿನ ಮುಖ್ಯಮಂತ್ರಿ ಮೂಲ ಸೌಕರ್ಯ ಯೋಜನೆಯಡಿ (ಸಿಎಂಆಯ್‌ಡಿಪಿ) ಗ್ರಾಮದ ವಿವಿಧ್ಯೋದ್ದೇಶ ಪ್ರಾಥಮಿಕ ಗ್ರಾಮೀಣ ಕೃಷಿ ಸಹಕಾರಿ ಸಂಘ ಮರಾಟ ಮಳಿಗೆ ಮತ್ತು ಸಂಘದ ಕಟ್ಟಡ ನಿಧಿ ನಿರ್ಮಾಣ ಕಾಮಗಾರಿಗೆ ಭೂಮಿ ಪೂಜೆ ನೇರವೇರಿಸಿ ಮಾತನಾಡಿದರು. ಈ ಮಳಿಗೆ ನಿರ್ಮಾಣವಾಗುವುದರಿಂದ ಸಂಘಕ್ಕೂ ಆದಾಯ ಹೆಚ್ಚುತ್ತದೆ ಅದಲ್ಲದೇ ಇಲ್ಲಿನ ರೈತರಿಗೂ, ಗ್ರಾಮಸ್ಥರಿಗೂ ಉದ್ಯೋಗಾವಕಾಶ ಕಲ್ಪಿಸಿದಂತಾಗುತ್ತದೆ.

ಇದಕ್ಕೆಲ್ಲಾ ಶಾಸಕ ಬಾಬಾಸಾಹೇಬ ಪಾಟೀಲ ಇವರ ವಿಶೇಷ ಪ್ರಯತ್ನದಿಂದ ಕಾಮಗಾರಿ ಪ್ರಾರಂಭವಾಗಿದ್ದು ಮಾರಾಟ ಮಳಿಗೆ ಅಂದಾಜು ವೆಚ್ಚ 10 ಲಕ್ಷ ರೂ.ಗಳು ಇರುತ್ತದೆ ಗುತ್ತಿಗೆದಾರರು ಕಳಪೆ ಮಟ್ಟದ ಕಾಮಗಾರಿಯಾಗದಂತೆ ನೋಡಿಕೊಳ್ಳಬೇಕೆಂದು ಖಡಕ್ಕಾಗಿ ಹೇಳಿದರು.

# ಪ್ರಾಚೀನ ಕನ್ನಡಿಗರ ಭಾವೈಕ್ಯತೆ ಸಾರುವ ತಿಳಗೋಳ ಗ್ರಾಮದ ಸ್ಮಾರಕಗಳು : ಮುಡುಬಿ ಗುಂಡೇರಾವ

ಕಲಬುರಗಿ: ಪ್ರಾಚೀನ ಕನ್ನಡಿಗರ, ಧಾರ್ಮಿಕ ಸಹಿಷ್ಣುತೆ ಮತ್ತು ಭಾವೈಕ್ಯತೆ ಸಾರುವ ಸ್ಮಾರಕಗಳು ತಿಳಗೋಳ ಗ್ರಾಮದಲ್ಲಿವೆ, ಅವುಗಳ ರಕ್ಷಣೆ ಅಗತ್ಯವಾಗಿದೆ ಎಂದು ಸಂಶೋಧಕ ಸಾಹಿತಿ ಹಾಗು ಕಲಬುರಗಿ ಜಿಲ್ಲಾ 22ನೇ ಸಾಹಿತ್ಯ ಸಮ್ಮೇಳನ ಅಧ್ಯಕ್ಷ ಮುಡುಬಿ ಗುಂಡೇರಾವ ಅಭಿಮತವ್ಯಕ್ತಪಡಿಸಿದರು.

ಅವರು ಕಲಬುರಗಿ ಜಿಲ್ಲೆಯ ತಿಳಗೋಳ ಗ್ರಾಮದ ಈಶ್ವರ ಮತ್ತು ಹನುಮಾನ ದೇವಾಲಯದ ಪರಿಸರದಲ್ಲಿ ಬಸವೇಶ್ವರ ಸಮಾಜ ಸೇವಾ ಬಳಗ ಹಮ್ಮಿಕೊಂಡ ಜಿಲ್ಲೆಯ ಐತಿಹಾಸಿಕ ಸ್ಮಾರಕಗಳ ಪರಿಚಯಾತ್ಮಕ -57ನೇ ಕಾರ್ಯಕ್ರಮದಲ್ಲಿ ವಿಶೇಷ ಉಪನ್ಯಾಸ ನೀಡಿ ಮಾತನಾಡುತ್ತಾ ತಿಳಗೋಳ ಗ್ರಾಮವು ಪ್ರಾಚೀನ ಕಾಲದಲ್ಲಿ ತುಮಬಾ ಹೆಸರು ಮಾಡಿದ ಗ್ರಾಮವಾಗಿದೆ ಎನ್ನುವುದಕ್ಕೆ ಗ್ರಾಮದಲ್ಲಿ ದೊರೆತಿರುವ ಈಶ್ವರ, ವಿಷ್ಣು, ಬುದ್ಧ, ಮಹಾವೀರ ಮುಂತಾದ ವಿಗ್ರಹಗಳು ಇದಕ್ಕೆ ಪುಷ್ಠಿ ನೀಡುತ್ತವೆ, ಒಂದೇ ಗ್ರಾಮದಲ್ಲಿ ಶೈವ, ವೈಷ್ಣವ, ಜೈನ, ಬೌದ್ಧ, ಇಸ್ಲಾಂ ಮುಂತಾದ ಧರ್ಮೀಯರು ಭಾವೈಕ್ಯತೆಯಿಂದ ಸುಂದರ ಬದುಕು ಸಾಗಿಸಿ, ಆದರ್ಶ ಸಮಾಜ ನಿರ್ಮಿಸಿದ್ದು ಕನ್ನಡ ನಾಡಿಗೆ ಹೆಮ್ಮೆಯ ಸಂಗತಿಯಾಗಿದೆ. ಕಲ್ಯಾಣ ಚಾಲುಕ್ಯರ, ರಾಷ್ಟ್ರಕೂಟರ ಕಾಲದಲ್ಲಿ ಕಲೆ ವಾಸ್ತು ಶಿಲ್ಪ, ಸಂಗೀತ, ಸಾಹಿತ್ಯ, ಧರ್ಮ, ಆಧ್ಯಾತ್ಮ ಝೇಂಕಾರಗೊಂಡಿತ್ತು ಎನ್ನುವುದಕ್ಕೆ ಗ್ರಾಮದಲ್ಲಿನ ಹಲವಾರು ದೇವಾಲಯ, ಸ್ಮಾರಕಗಳು ಸಾಕ್ಷಿ ನೀಡುತ್ತವೆ, ಈ ಗ್ರಾಮವು ವಿದ್ಯಾಕೇಂದ್ರವಾಗಿ, ಆಡಳಿತ ಘಟಕವಾಗಿ ಉತ್ತಮ ಕೆಲಸ ಮಾಡಿದೆ ಎನ್ನುವುದಕ್ಕೆ ತಿಳಗೋಳ ಗ್ರಾಮದ ಶಾಸನವು ನಮಗೆ ದಾಖಲೆ ನೀಡುತ್ತದೆ ಎಂದರು.



ಬಳಗದ ಅಧ್ಯಕ್ಷ ಎಚ್. ಬಿ ಪಾಟೀಲ ಮಾತನಾಡಿ ನಮ್ಮ ಬಳಗದವತಿಯಿಂದ ಕಳೆದ ಮೂರು ವರ್ಷಗಳಿಂದ ಐತಿಹಾಸಿಕ ಜಾಗೃತಿ ಅಭಿಯಾನ ಹಳ್ಳಿಯಡೆಗೆ ನಡಿಗೆ ಎಂಬ ವಿನೂತನ ಕಾರ್ಯಕ್ರಮವು ತುಂಬಾ ಯಶಸ್ವಿಯಾಗಿ ಸಾಗಿಬಂದಿದೆ. ಅಳಿವಿನಂಚಿನಲ್ಲಿರುವ ಸ್ಮಾರಕಗಳ ರಕ್ಷಣೆ ನಮ್ಮೆಲ್ಲರ ಹೊಣೆಯಾಗಿದೆ ಎಂದರು. ಪ್ರಮುಖರಾದ ಶಿವಲಿಂಗಪ್ಪ ಹಳ್ಳಿ, ದೊಡ್ಡಪ್ಪಗೌಡ ಪಾಟೀಲ, ಸದಾಶಿವ ವಿಶ್ವಕರ್ಮ, ಲಕ್ಷ್ಮಣ ದೊಡ್ಡಮನಿ, ಲಕ್ಷ್ಮೀಕಾಂತ ಉಮರಾಣಿ, ಚಾಂದ ಪಟೇಲ, ಸಿದ್ದು ಬೆಗೆಹಳ್ಳಿ ಮುಂತಾದವರಿದ್ದರು.

ತಿಳಗೋಳ ಗ್ರಾಮವು ಪ್ರಾಚೀನ ಕಾಲದಲ್ಲಿ ಕನ್ನಡ ನಾಡಿಗೆ ಕೀರ್ತಿ ತಂದ ಗ್ರಾಮವಾಗಿದೆ, ಕಲೆ, ವಾಸ್ತು ಶಿಲ್ಪ, ಸಂಗೀತ, ಧರ್ಮ, ಆಧ್ಯಾತ್ಮ ಮೊಳಗಿದ ಕ್ಷೇತ್ರವಿದು. ಶೈವ, ವೈಷ್ಣವ, ಜೈನ, ಬೌದ್ಧ, ಇಸ್ಲಾಂ ಧರ್ಮೀಯರು ಬಾಳಿ ಬೆಳಗಿದ ಭಾವೈಕ್ಯತೆಯ ತವರೂರು, ಕಲ್ಯಾಣ ಚಾಲುಕ್ಯ ಮತ್ತು ರಾಷ್ಟ್ರಕೂಟರ ಆಳ್ವಿಕೆಯಲ್ಲಿ ಆದರ್ಶ ಗ್ರಾಮವಾಗಿತ್ತು. ಸಾವಿರಾರು ವರ್ಷಗಳ ಇತಿಹಾಸವನ್ನು ಗ್ರಾಮವು ತನ್ನ ಒಡಲಲ್ಲಿಟ್ಟುಕೊಂಡು ಕನ್ನಡಿಗರ ಸಾಧನೆಯನ್ನು ಸಾದರ ಪಡಿಸುತ್ತಿದೆ.

# ಗದಗ: ಏಡ್ಸ್ ಅರಿವಿನ ಮಾಸಾಚರಣೆ ಕಾರ್ಯಕ್ರಮ

ಗದಗ: ಜಿಲ್ಲಾ ಆಡಳಿತ, ಜಿಲ್ಲಾ ಪಂಚಾಯತ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಹಾಗೂ ಜಿಲ್ಲಾ ಏಡ್ಸ್ ತಡೆಗಟ್ಟುವಿಕೆ ಮತ್ತು ನಿಯಂತ್ರಣ ಘಟಕ ಜಿಲ್ಲೆಯ ರೆಡ್ ರಿಬ್ಬನ್ ಕಾಲೇಜುಗಳು ಮತ್ತು ಜಿಲ್ಲೆಯ ಎಲ್ಲ ಶಿಕ್ಷಣ ಮಹಾವಿದ್ಯಾಲಯಗಳು ಸರಕಾರಿ ಪ್ರಥಮ ದರ್ಜೆ ಮಾಹಾವಿದಾಲಯ ನರಸಾಪೂರ-ಗದಗ ಇವರುಗಳ ಸಹಯೋಗದಲ್ಲಿ ಜಿಲ್ಲಾ ಮಟ್ಟದ ಅಂತರಾಷ್ಟ್ರೀಯ ಯುವ ದಿನ ಹಾಗೂ ತೀವ್ರತರ ಹೆಚ್.ಐ.ವಿ. ಅರಿವಿನ ಮಾಸಾಚರಣೆ ಉದ್ಘಾಟನಾ ಕಾರ್ಯಕ್ರಮ ಜರುಗಿತು.

ಪ್ರಾರಂಭದಲ್ಲಿ ಕುಮಾರಿ ಆಶಾ ಶಿಂಧೆ ಪ್ರಾರ್ಥಿಸಿದರು. ಪ್ರೋ. ಮಹಾದೇವ ವಡೇಕಾರ ಇವರು ವೇದಿಕೆ ಮೇಲೆ ಆಸಿನರಾದ ಎಲ್ಲರನ್ನು ಸ್ವಾಗತಿಸಿದರು.

ಸಮಾರಂಭ ಉದ್ಘಾಟಿಸಿದ ಡ್ಯಾಪ್ಕೂ ಅಧಿಕಾರಿಗಳಾದ ಡಾ. ಅರುಂಧತಿ ಕೆ. ಅವರು ಮಾತನಾಡಿ ಯೌವನವನ್ನು ಸದುಪಯೋಗಪಡಿಸಿಕೊಳ್ಳಲು ಮಾನಸಿಕ ದೈಹಿಕ ಸಾಮಾಜಿಕ ಆರೋಗ್ಯದ ಹಿತಕ್ಕಾಗಿ ಸಮಾಜದಲ್ಲಿ ಒಳ್ಳೆಯ ಸಂಪನ್ಮೂಲ ವ್ಯಕ್ತಿಗಳಾಗಿ ಬೆಳೆಯಬೇಕು ಹಾಗೂ ಹೆಚ್.ಐ.ವಿ. ಏಡ್ಸ್ ಅರಿವಿನ ಮಾಸಾಚರಣೆಯಲ್ಲಿ ರೋಗದ ಬಗ್ಗೆ ಮಾಹಿತಿ ತಿಳಿಯಲು ಕರೆ ನೀಡಿದರು. "ಸುಸ್ಥಿರ ಅಭಿವೃದ್ಧಿಗಾಗಿ ಸ್ಥಳೀಯ ಯುವ ಜನರ ಪಾತ್ರ ಹಾಗೂ ಗುರಿಗಳು" ಈ ವರ್ಷದ ಘೋಷಣೆಯಂತೆ ಎನ್ನುವಂತೆ



ಇಂದಿನ ಯುವಕರು ಸಧೃಢ ಆರೋಗ್ಯವನ್ನು ಹೊಂದಿ, ದೇಶದ ಭವಿಷ್ಯ ರೂಪಿಸುವಲ್ಲಿ ಕೈಜೋಡಿಸಬೇಕೆಂದು ತಿಳಿ ಹೇಳಿದರು.

ಇಂದಿನ ಯುವ ಜನಾಂಗದಲ್ಲಿ ಸಾಮಾಜಿಕ ಮೌಲ್ಯಗಳು ಕಡಿಮೆಯಾಗಿದ್ದು, ಗುರು ಹಿರಿಯರು, ತಂದೆ ತಾಯಿ ಎನ್ನುವ ಗೌರವವಿಲ್ಲದೆ ಆಧುನಿಕ ಮಾಧ್ಯಮದ ತಂತ್ರಜ್ಞಾನಕ್ಕೆ ಮಾರು ಹೋಗಿ ತಮ್ಮ ಜೀವನವನ್ನು ಹಾಳು ಮಾಡಿಕೊಳ್ಳುತ್ತಿದ್ದಾರೆ. ನಮ್ಮ ದೇಶದಲ್ಲಿ 40% ಇರುವ ಯುವಜನರು ತಮ್ಮ ಜವಾಬ್ದಾರಿಯನ್ನು ಅರಿತು ದೇಶದ ಒಳಿತಿಗೆ ಪೂರಕವಾದ ತೀರ್ಮಾಣವನ್ನು ಕೈಗೊಂಡು ಸದೃಡವಾದ ದೇಶ ಕಟ್ಟುವಲ್ಲಿ ಕೈ ಜೋಡಿಸಬೇಕೆಂದು ತಿಳಿಸಿದರು. ಹಾಗೂ ರಕ್ತದಾನ ಮಾಡಲು ಯುವ ಸಮುದಾಯ ಮುಂದಾಗಬೇಕು, ರಕ್ತದಾನ ಮಾಡಲು ಹೆಚ್.ಬಿ. ಪ್ರಮಾಣ 12.5 ಗ್ರಾಂ ಇರಬೇಕು, ತೂಕ 45 ಕೆ.ಜಿ. ಗಿಂತ ಹೆಚ್ಚಿಗೆ ಇರಬೇಕು, 18 ರಿಂದ 60 ವಯೋಮಾನದ ಪುರುಷ ಮಹಿಳೆ ಎಂಬ ಬೇಧ ವಿಲ್ಲದೆ ಯಾರು ಬೇಕಾದರೂ ರಕ್ತದಾನ ಮಾಡಬಹುದು ಎಂದು ತಿಳಿಸಿದರು. ಹಾಗೂ ವಿದ್ಯಾರ್ಥಿಗಳಿಕೆ ಸಧೃಢ ಆರೋಗ್ಯ ಮತ್ತು ಸನ್ನಡತೆಗೆ ಪ್ರಮಾಣ ವಚನ ಬೋಧಿಸಿದರು. ಇನ್ನೋರ್ವ ಅಥಿತಿಗಳಾದ ಶ್ರೀ ಬಿ.ಬಿ. ಲಾಳಗಟ್ಟಿ ಜಿಲ್ಲಾ ಐಸಿಟಿಸಿ ಮೇಲ್ವಿಚಾರಕರು ಪ್ರಾಸ್ತಾವಿಕವಾಗಿ ಮಾತನಾಡಿ ಅಂತರಾಷ್ಟ್ರೀಯ ಯುವ ದಿನಾಚರಣೆಯ ಮಹತ್ವವನ್ನು ತಿಳಿಸುತ್ತಾ ಇಂದಿನ ಯುಗದಲ್ಲಿ ಯುವಕರು ಆರೋಗ್ಯ ಅರಿವವನ್ನು ಮೂಡಿಸಿ, ಶಿಕ್ಷಣವನ್ನು ಪರಿವರ್ತಿಸುವುದು. ಸುಸ್ಥಿರ ಅಭಿವೃದ್ಧಿಯನ್ನು ಸಾಧಿಸಲು ಶಿಕ್ಷಣವನ್ನು ಹೆಚ್ಚು ಪ್ರಸ್ತುತ ನ್ಯಾಯ ಸಮ್ಮತವಾಗಿಸುವ ನಿಟ್ಟಿನಲ್ಲಿ ಯುವಜನರ ಪಾತ್ರ ಮುಖ್ಯವಾಗಿರುವುದೆಂದು ತಿಳಿಸಿದರು

ಮುಂದುವರೆದು ಮಾತನಾಡಿ ಜಾತಿ, ಧರ್ಮ, ಲಿಂಗ ಗುಂಪು ಆಧಾರಿತ ಸವಾಲುಗಳನ್ನು ಎದುರುಸಿ ಯುವಕರು ಸನ್ನಡತೆಯನ್ನು ಅಳವಡಿಸಿಕೊಳ್ಳಬೆಂದು ತಿಳಿಸಿದರು. ವಿಶ್ವದ ಇತಿಹಾಸದಲ್ಲಿ ಸ್ವಾಮಿ ವಿವೇಕಾನಂದರು ಹೇಳುವಂತೆ ಪ್ರಯತ್ನವೆಂಬ ಚಂದ್ರನ್ನನ್ನು ಬೆಳಗಿಸಿದತೆ ಯಶಸ್ಸೆಂಬ ಬೆಳದಿಂಗಳು ಸಿಗುತ್ತದೆ ಹಾಗೇಯೇ ಶ್ರದ್ಧೆ, ಸಹನೆ, ಸತತ ಪ್ರಯತ್ನ ಜಯ ಸಾಧಿಸಲು ಅಗತ್ಯವಾಗಿ ಬೇಕಾದ ಮೂರು ಸಾಧನಗಳು ಇದರ ಜೊತೆಗೆ ಆತ್ಮವಿಶ್ವಾಸವಿದ್ದರೆ ಮಾತ್ರೆ ವಿಜಯಲಕ್ಷೀ ಒಲಿಯುತ್ತಾಳೆಂದು ತಿಳಿಸಿದರು. ರಕ್ತದಾನ ಮಾಡಲು ಹಾಗೂ ರೋಗಿಯ ಜೀವ ಉಳಿಸಲು ವೈದ್ಯರಾಗಬೇಕಿಲ್ಲ, ರಕ್ತದಾನ ಮಾಡಿದರೆ ಸಾಕು ಎಂದು ತಿಳಿಸಿದರು. ನಂತರ ಕಾಲೇಜಿನ ಪ್ರಾಚಾರ್ಯರಾದ ಡಾ. ಶಿವಪ್ಪ ಕುರಿ ರವರು ಅಧ್ಯಕ್ಷೀಯ ನುಡಿಗಳಲ್ಲಿ ಮಾತನಾಡಿ ಇಂದಿನ ಯುವಕರು ದುಶ್ಚಟಗಳಿಂದ ದೂರವಿದ್ದು, ಯವ್ವನವನ್ನು ಜೋಪಾನ ಮಾಡಿಕೊಳ್ಳಬೇಕು ಹಾಗೂ ಶ್ರೀಮಂತ ದುರಾಚಾರಿಗಳಿಂದ ದೂರವಿದ್ದ ಸಮಾಜಕ್ಕೆ ಒಳ್ಳೇಯ ಕೊಡುಗೆ ಕೋಡಲು ತಿಳಿಸಿದರು. ಇಲಾಖೆಯ ವಿವಿಧ ಸಾಮಾಜಿಕ ಕಾರ್ಯಗಳಲ್ಲಿ ಪಾಲ್ಗೊಂಡು ಸಾಮಾಜಿಕ ಸೇವೆಗೆ ಮುಂದಾಗಬೇಕೆಂದು ಹೇಳಿದರು.

ಸಮಾರಂಭದಲ್ಲಿ ಪ್ರೋ. ಖಲೀಲ ಅಹ್ಮದ್, ಸಣ್ಣಕ್ಕಿ, ಪ್ರೋ. ಕ್ಯಾರಕೊಪ್ಪ, ಶ್ರೀಮತಿ ಚೆನ್ನಮ್ಮ ಆಪ್ತಸಮಾಲೋಚಕರು, ಮಹೇಶ ಎಸ್.ಎಸ್.ಕೆ. ಸಂಯೋಜಕರು ಹಾಗೂ ಆರೋಗ್ಯ

# 'ಹರ್ ಘರ್ ತಿರಂಗಾ' ಅಭಿಯಾನದ ಅಂಗವಾಗಿ ಬೈಕ್ ರ್ಯಾಲಿ

ಬೀದರ್: ಸ್ವಾತಂತ್ರ್ಯ ದಿನಾಚರಣೆ ಹಾಗೂ 'ಹರ್ ಘರ್ ತಿರಂಗಾ' (ಮನೆ ಮನೆಯಲ್ಲೂ ರಾಷ್ಟ್ರಧ್ವಜ) ಅಭಿಯಾನದ ಅಂಗವಾಗಿ ಬೀದರ್ ಜಿಲ್ಲಾಡಳಿತದ ವತಿಯಿಂದ ನಗರದ ಐತಿಹಾಸಿಕ ಬೀದರ್ ಕೋಟೆ ಆವರಣದಲ್ಲಿ ಶುಕ್ರವಾರ ಬೈಕ್ ಬೃಹತ್ ರ್ಯಾಲಿ ಹಮ್ಮಿಕೊಳ್ಳಲಾಯಿತು.

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಬೀದರ್ ಮಹಾನಗರ ಪಾಲಿಕೆ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ ಹಾಗೂ ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘ, ಬೀದರ್ ಜಿಲ್ಲಾ ಘಟಕಗಳ ಸಂಯುಕ್ತ ಆಶ್ರಯದಲ್ಲಿ ಈ ದೇಶಭಕ್ತಿ ಕಾರ್ಯಕ್ರಮ ಆಯೋಜಿಸಲಾಗಿತ್ತು.

ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ಜಿಲ್ಲಾಧಿಕಾರಿ ಶಿಲ್ಪಾ ಶರ್ಮಾ ಅವರು, ನಾಡಿನ ಜನತೆಗೆ ಸ್ವಾತಂತ್ರ್ಯ ದಿನಾಚರಣೆಯ ಶುಭಾಶಯ ಕೋರಿದರು. "ಹರ್ ಘರ್ ತಿರಂಗಾ ಕಾರ್ಯಕ್ರಮದ ಅಂಗವಾಗಿ ಇಂದು ಹಮ್ಮಿಕೊಂಡಿರುವ ಈ ಬೈಕ್ ರ್ಯಾಲಿಗೆ ಬೀದರ್‌ನ ಸ್ಥಳೀಯರು ಹಾಗೂ ಯುವಜನತೆ ಅತ್ಯುತ್ಸಾಹದಿಂದ ಬೆಂಬಲ ನೀಡಿದ್ದಾರೆ. ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಕನ್ನಡ ಸಾಹಿತ್ಯ ಪರಿಷತ್ತು ಹಾಗೂ ವಿಶೇಷವಾಗಿ ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘದ ಪದಾಧಿಕಾರಿಗಳು ಅತಿ ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಕಾರ್ಯಕ್ರಮ ಯಶಸ್ವಿಗೊಳಿಸಿದ್ದಾರೆ. ನಾಳೆ ನಡೆಯುವ ಸ್ವಾತಂತ್ರ್ಯ ದಿನಾಚರಣೆಯ ಮುಖ್ಯ ಕಾರ್ಯಕ್ರಮದಲ್ಲೂ ಬೀದರನ ಸಮಸ್ತ ನಾಗರಿಕರು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಳ್ಳಬೇಕು," ಎಂದು ಕರೆ ನೀಡಿದರು.

ಬೀದರ್ ಮಹಾನಗರ ಪಾಲಿಕೆ ಆಯುಕ್ತರಾದ ಮುಕುಲ್ ಜೈನ್, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಸಹಾಯಕ ನಿರ್ದೇಶಕ ಮಂಜುನಾಥ ಸುಳ್ಳೊಳ್ಳಿ, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ಸಿದ್ರಾಮ ಶಿಂಧೆ, ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತಿನ ಅಧ್ಯಕ್ಷ ಸುರೇಶ ಚನ್ನಶೆಟ್ಟಿ, ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘದ ಜಿಲ್ಲಾಧ್ಯಕ್ಷ ಸೋಮಶೇಖರ ಬಿರಾದಾರ ಚಿದ್ರಿ ಹಾಗೂ ಇತರೆ ಗಣ್ಯರು ಕಾರ್ಯಕ್ರಮದಲ್ಲಿದ್ದರು.



ಗಮನ ಸೆಳೆದ ಅಧಿಕಾರಿಗಳ ಬೈಕ್ ಸವಾರಿ:

ಬಳಿಕ ಸ್ವತಃ ಜಿಲ್ಲಾಧಿಕಾರಿಗಳು ಸ್ಕೂಟರ್ ಚಲಾಯಿಸುವ ಮೂಲಕ ಬೈಕ್ ರ್ಯಾಲಿಗೆ ಚಾಲನೆ ನೀಡಿ, ಮುಂಚೂಣಿಯಲ್ಲಿ ಸಾಗಿದ್ದು ವಿಶೇಷವಾಗಿತ್ತು. ನೂರಾರು ಯುವಕರು, ಸಾರ್ವಜನಿಕರು ಹಾಗೂ ಅಧಿಕಾರಿಗಳು ತಮ್ಮ ಬೈಕಗಳಿಗೆ ತ್ರಿವರ್ಣ ಧ್ವಜ ಹಾಗೂ ಕನ್ನಡ ಬಾವುಟಗಳನ್ನು ಕಟ್ಟಿಕೊಂಡು ರ್ಯಾಲಿಯಲ್ಲಿ ಹೆಮ್ಮೆಯಿಂದ ಹೆಜ್ಜೆ ಹಾಕಿದರು.

ಬೈಕ್ ರ್ಯಾಲಿಯುದ್ದಕ್ಕೂ 'ಭಾರತ್ ಮಾತಾ ಕೀ ಜೈ' ಘೋಷಣೆಗಳು ಹಾಗೂ 'ಹರ್ ಕರಮ್ ಅಪ್ನಾ ಕರೆಂಗೇ.. ಏ ವತನ್ ತೇರೇ ಲಿಯೇ' ಎಂಬ ದೇಶಭಕ್ತಿ ಗೀತೆಗಳು ಮೊಳಗಿದವು. ಐತಿಹಾಸಿಕ ಕೋಟೆಯ ಅವರಣದಲ್ಲಿ ನೂರಾರು ತ್ರಿವರ್ಣ ಧ್ವಜಗಳು ಹಾರಾಡುತ್ತಾ ಸಾಗಿದ ದೃಶ್ಯವು ನೋಡುಗರಲ್ಲಿ ರೋಮಾಂಚನ ಹಾಗೂ ದೇಶಭಕ್ತಿಯನ್ನು ಜಾಗೃತಗೊಳಿಸುವಂತಿತ್ತು.

# ಆದಷ್ಟು ಬೇಗ ಕಾಲುವೆಗೆ ನೀರು ಹರಿಸಲಾಗುವುದು

ಅಫಜಲಪುರ ; ತಾಲ್ಲೂಕಿನ ಮಾತೋಳಿ ಗ್ರಾಮದ ಎಡದಂಡೆ ಕಾಲುವೆಯಲ್ಲಿ ಸುಮಾರು ದಶಕಗಳಿಂದ ನೀರು ಹರಿಸದೆ ಹಾಳು ಬಿದ್ದಿರುವುದು ಆದಷ್ಟು ಬೇಗ ಬಗೆಹರಿಸಿ ಕಾಲುವೆಗೆ ನೀರು ಹರಿಸಲಾಗುವುದು ಎಂದು ನೀರಾವರಿ ಇಲಾಖೆಯ ಮುಖ್ಯ ಕಾರ್ಯನಿರ್ವಾಹಕ ಅಭಿಯಂತರರಾದ ವಿನಾಯಕ್ ಸುಗೂರು ತಿಳಿಸಿದರು.ಅಫಜಲಪುರ ತಾಲ್ಲೂಕಿನ ಮಾತೋಳಿ ಗ್ರಾಮದ ಎಡದಂಡೆಯ ಕಾಲುವೆಗೆ ನೀರು ಹರಿಸಲು ಅಫಜಲಪುರ ತಾಲ್ಲೂಕು ಶಾಶ್ವತ ನೀರಾವರಿ ಹೋರಾಟ ಸಮಿತಿಯಿಂದ ಮನವಿ ಸ್ವೀಕರಿಸಿ ಮಾತನಾಡಿದ ಅವರು, ಕಾಲುವೆಗಳನ್ನು ಪರಿಶೀಲನೆ ಮಾಡಿ ತಕ್ಷಣ ಕ್ರಮ ಕೈಗೊಳ್ಳಲಾಗುವುದು.ಕಾಲುವೆಗಳು ಅವೈಜ್ಞಾನಿಕವಾಗಿ ನಿರ್ಮಾಣವಾಗಿದ್ದಕ್ಕೆ ಬೇಸರ ವ್ಯಕ್ತಪಡಿಸಿ, ಮುಂದೆ ಈ ರೀತಿ ಕಾಮಗಾರಿ ಆದರೆ ಸಂಬಂಧ ಪಟ್ಟ ಅಧಿಕಾರ ಮೇಲೆ ಕಾನೂನು ಕ್ರಮ ಕೈಗೊಳ್ಳಬೇಕಾಗುತ್ತದೆ ಎಂದು ಹೇಳಿದರು.



ಮುಂದಿನ ದಿನ ಸಂಬಂಧಪಟ್ಟ ಅಧಿಕಾರಿಗಳು ಸ್ಥಳ ಪರಿಶೀಲನೆ ಮಾಡಿ ರೈತರ ಹೊಲಗಳಿಗೆ ನೀರು ಹರಿಸಲು ಇಲಾಖೆಯ ಕಾರ್ಯನಿರ್ವಾಹಕ ಅಭಿಯಂತರಾದ ಶಿವಕುಮಾರ ಸ್ವಾಮಿ, ಸಹಾಯಕ ಅಭಿಯಂತರರಾದ, ಸಂತೋಷ್ ಸಜ್ಜನ್, ಸುಧೀರ್ ಸಂಗಾಣಿ, ಸಂತೋಷ್ ಪಾಟೀಲ್ ಸೂಚನೆ ನೀಡಿದರು.

ಈ ಸಂದರ್ಭದಲ್ಲಿ ರೈತ ಮುಖಂಡರಾದ ಶ್ರೀಮಂತ ಬಿರಾದರ್, ಸಿದ್ದು ದೇವರನಾವದಗಿ, ಅಬ್ಬಾಸಲಿ ನದಾಫ್, ನಾಮದೇವ್ ಕಡಕೋಳ, ಅಶೋಕ್ ಬಗಲಿ, ಶಿವು ಪದಿಕಿ, ರಾಜಶೇಖರ್ ಪಾಟೀಲ್ , ಕಾಸಿಂಸಾಬ್, ರವಿ ಹಾಜರಿದ್ದರು

# ದೇಶ ಪ್ರೇಮದೊಂದಿಗೆ ಕರ್ತವ್ಯಪ್ರಜ್ಞೆ ಬೆಳೆಸಿಕೊಳ್ಳಿ :ಕಾಂಬಳೆ



■ ಉದಯರಶ್ಮಿ ದಿನಪತ್ರಿಕೆ

ಅಥಣಿ: ಸ್ಥಳೀಯ ಸರ್ಕಾರಿ ಪ್ರಥಮ ದರ್ಜೆ ಕಾಲೇಜು ಹಾಗೂ ಸ್ನಾತಕೋತ್ತರ ಅಧ್ಯಯನ ಕೇಂದ್ರದಲ್ಲಿ ದೇಶಭಕ್ತಿ, ರಾಷ್ಟ್ರಾಭಿಮಾನ ಹಾಗೂ ಸಂಭ್ರಮದ ವಾತಾವರಣದಲ್ಲಿ 80ನೇ ಸ್ವಾತಂತ್ರ್ಯ ದಿನಾಚರಣೆಯನ್ನು ಅತ್ಯಂತ ವಿಜೃಂಭಣೆಯಿಂದ ಆಚರಿಸಲಾಯಿತು. ಕಾಲೇಜಿನ ಆವರಣದಲ್ಲಿ ರಾಷ್ಟ್ರಧ್ವಜಕ್ಕೆ ಗೌರವ ಸಲ್ಲಿಸುವುದರೊಂದಿಗೆ ಕಾರ್ಯಕ್ರಮಕ್ಕೆ ಚಾಲನೆ ನೀಡಲಾಯಿತು.

ಕಾರ್ಯಕ್ರಮದಲ್ಲಿ ಕಾಲೇಜಿನ ಪ್ರಾಂಶುಪಾಲರಾದ ವಿಲಾಸ್ ಕಾಂಬಳೆ ಮಾತನಾಡಿ, ಸ್ವಾತಂತ್ರ್ಯವು ಕೇವಲ ಆಚರಣೆಗೆ ಸೀಮಿತವಾಗದೆ, ಅದರ ಹಿಂದಿರುವ ಹೋರಾಟದ ಮೌಲ್ಯಗಳನ್ನು ಅರಿತುಕೊಳ್ಳಬೇಕು. ಯುವಜನರು ದೇಶದ ಭವಿಷ್ಯವಾಗಿದ್ದು, ಶಿಕ್ಷಣದ ಜೊತೆಗೆ ಶಿಸ್ತು, ಪ್ರಾಮಾಣಿಕತೆ, ಸಾಮಾಜಿಕ ಜವಾಬ್ದಾರಿ ಹಾಗೂ ರಾಷ್ಟ್ರಪ್ರೇಮವನ್ನು ಬೆಳೆಸಿಕೊಳ್ಳಬೇಕು ಎಂದು ಹೇಳಿದರು.

ಹಿರಿಯ ಉಪನ್ಯಾಸಕರಾದ ಶಾಂತಿನಾಥ ಬನೋಜ್ ಮಾತನಾಡಿ, ಭಾರತವು ವಿವಿಧ ಭಾಷೆ, ಧರ್ಮ, ಸಂಸ್ಕೃತಿ ಹಾಗೂ ಪರಂಪರೆಗಳನ್ನು ಹೊಂದಿರುವ ವೈವಿಧ್ಯಮಯ ರಾಷ್ಟ್ರವಾಗಿದೆ. ಈ ವೈವಿಧ್ಯತೆಯಲ್ಲಿಯೇ ಏಕತೆಯನ್ನು ಕಾಪಾಡುವುದು ಪ್ರತಿಯೊಬ್ಬ ಭಾರತೀಯನ ಜವಾಬ್ದಾರಿಯಾಗಿದೆ ಎಂದರು.

ಕಾರ್ಯಕ್ರಮದಲ್ಲಿ ಉಪನ್ಯಾಸಕರಾದ ಸಂತೋಷ್ ಉಂಡಾಡಿ ಸುರೇಶ, ಕುಮಾರ ತಕತರಾವ ರಾಜು ಭಜಂತ್ರಿ ಹರೀಶ ನಾಗರತ್ನ ರೇಣುಕೇಗೌಡರ ಶಿಲ್ಪಾ ರಾಮನ್ನಗೊಳ ಸುರೇಖಾ ದೇವರಡ್ಡಿ ಬಿ ಆರ್ ಮುಗ್ಗನ್ನವರ ರಾಘವೇಂದ್ರ ಗೌರಿ ಬೆಳಮಗಿ ಶೇಖರ್ ಕಾಂಬಳೆ ಶಿವಾನಂದ ಮಟ್ಟಪ್ಪನವರ ನಾಗಪ್ಪ ಕೋಟಿ ನಚಿಕೇತ ನೂಲಿ ಸಿದ್ದು ಕುಡ್ಡಣ್ಣವರ ಸಂಜೀವ ಕಾಂಬಳೆ ಪರಶುರಾಮ ಪೂಜಾರಿ ರಾಜೇಂದ್ರ ಗೊಂಧಳೆ ಬಸವರಾಜ್ ಪಾಟೀಲ್ ಶ್ರೀಶೈಲ ದೇವರಡ್ಡಿ ಸಮಸ್ತ ಸಿಬ್ಬಂದಿ ವರ್ಗದವರು ಹಾಗೂ ಅಪಾರ ಸಂಖ್ಯೆಯಲ್ಲಿ ವಿದ್ಯಾರ್ಥಿಗಳು ಉಪಸ್ಥಿತರಿದ್ದು ಸ್ವಾತಂತ್ರ್ಯೋತ್ಸವದ ಸಂಭ್ರಮಕ್ಕೆ ಸಾಕ್ಷಿಯಾದರು.

ಆರ್ ಎಸ್ ದೊಡ್ಡನಿಂಗಪ್ಪಗೋಳ ಸ್ವಾಗತಿಸಿ, ನಿರೂಪಿಸಿ, ವಂದಿಸಿದರು.

# ಶ್ರೀ ಪಡಸಲಗೇಶ್ವರ ಸಹಕಾರ ಸಂಘದಲ್ಲಿ ಸ್ವಾತಂತ್ರ್ಯೋತ್ಸವ ಆಚರಣೆ



■ ಉದಯರಶ್ಮಿ ದಿನಪತ್ರಿಕೆ

ಬಾಗಲಕೋಟೆ (ಜಮಖಂಡಿ): ಶ್ರೀ ಪಡಸಲಗೇಶ್ವರ ಸಹಕಾರ ಸಂಘದ ವತಿಯಿಂದ 80ನೇ ಸ್ವಾತಂತ್ರ್ಯೋತ್ಸವವನ್ನು ಅತ್ಯಂತ ಸಂಭ್ರಮ ಮತ್ತು ದೇಶಭಕ್ತಿಯ ವಾತಾವರಣದಲ್ಲಿ ಆಚ-ರಿಸಲಾಯಿತು.

ಸಂಘದ ಅಧ್ಯಕ್ಷ ಹನಮಂತ ಕಾರಜೋಳ ಅವರು ರಾಷ್ಟ್ರಧ್ವಜಾರೋಹಣ ನೆರವೇರಿಸಿ ಸ್ವಾತಂತ್ರ್ಯ ಹೋರಾಟಗಾರರಿಗೆ ಗೌರವ ನಮನ ಸಲ್ಲಿಸಿದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿದ ಸಂಘದ ಅಧ್ಯಕ್ಷ ಹನಮಂತ ಕಾರಜೋಳ, “ಭಾರತ ದೇಶಕ್ಕೆ ಸ್ವಾತಂತ್ರ್ಯ ತಂದುಕೊಟ್ಟ ಮಹನೀಯರ ತ್ಯಾಗ ಮತ್ತು ಬಲಿದಾನವನ್ನು ಪ್ರತಿಯೊಬ್ಬರೂ ಸ್ಮ-ರಿಸಬೇಕು. ಯುವ ಪೀಳಿಗೆ ದೇಶಭಕ್ತಿ, ಶಿಸ್ತು ಮತ್ತು ಸೇವಾ ಮನೋಭಾವ ಬೆಳೆಸಿಕೊಂಡು ರಾಷ್ಟ್ರ ನಿರ್ಮಾಣದಲ್ಲಿ ಸಕ್ರಿಯವಾಗಿ ಪಾಲ್ಗೊಳ್ಳಬೇಕು” ಎಂದು ಹೇಳಿದರು.

ಉಪಾಧ್ಯಕ್ಷ ಸದಾಶಿವ ಬಡಿಗೇರ ಮಾತನಾಡಿ, “ಸ್ವಾತಂತ್ರ್ಯೋತ್ಸವವು ಕೇವಲ ಆಚರಣೆಗೆ ಸೀಮಿತವಾಗದೆ ದೇಶದ ಅಭಿವೃದ್ಧಿಗೆ ಪ್ರತಿಯೊಬ್ಬರೂ ತಮ್ಮದೇ ಆದ ಕೊಡುಗೆ ನೀಡುವ ಸಂಕಲ್ಪ ಮಾಡುವ ದಿನವಾಗಿದೆ” ಎಂದು ಅಭಿಪ್ರಾಯಪಟ್ಟರು.

ಈ ಸಂದರ್ಭದಲ್ಲಿ ಸಂಘದ ಸದಸ್ಯರಾದ ಡಾ. ಎಚ್.ಎನ್. ಹಳ್ಳಿ, ಡಾ. ಎ.ಜೆ. ಜನವಾಡ, ಸಿದ್ದಪ್ಪ ನ್ಯಾಮಗೌಡ, ಅಪ್ಪಾಸಾಬ ನ್ಯಾಮಗೌಡ, ಮಲ್ಲು ಕೋರಿ, ಪರಪ್ಪ ಲಿಗಾಡಿ ಹಾಗೂ ಭೀರಪ್ಪ ಮಿರ್ಜಿ ಉಪಸ್ಥಿತರಿದ್ದರು.

ಗ್ರಾಮಸ್ಥರಾದ ಈಶ್ವರ ನ್ಯಾಮಗೌಡ, ದೌಲತ್ ಕಡಕೋಳ, ಹನಮಂತ ನ್ಯಾಮಗೌಡ, ಶ್ರೀಶೈಲ ಮಠಪತಿ, ನಂದೆಪ್ಪ ಕಾರಜೋಳ ಸೇರಿದಂತೆ ಅನೇಕರು ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರು.

ಸಂಘದ ಮುಖ್ಯ ಕಾರ್ಯನಿರ್ವಾಹಕ ಸಿದ್ರಾಮ ಇಟ್ಟಿ ಅವರು ಎಲ್ಲರನ್ನು ಸ್ವಾಗತಿಸಿ, ವಂದಿಸಿದರು.

# ಆರೋಗ್ಯಕರ ಜೀವನಶೈಲಿಯನ್ನು ಕಾಪಾಡಿಕೊಳ್ಳಿ




■ ಉದಯರಶ್ಮಿ ದಿನಪತ್ರಿಕೆ

ವಿಜಯಪುರ: ನಗರದ ಬಿ.ಎಲ್.ಡಿ.ಇ ಸಂಸ್ಥೆಯ ಎಸ್.ಬಿ.ಕಲಾ ಮತ್ತು ಕೆ.ಸಿ.ಪಿ ವಿಜ್ಞಾನ ಮಹಾವಿದ್ಯಾಲಯದಲ್ಲಿ ಐಕ್ಯೂಎಸಿ, ವಿಕ್ಷಿತ್ ಭಾರತ್ ಸಂಕಲ್ಪ ಅಭಿಯಾನದಡಿಯಲ್ಲಿ ಕಾಲೇಜಿನಲ್ಲಿ ಆ.14 ರಂದು ಎನ್ ಎಸ್ ಎಸ್ ಘಟಕ-೫ ಮತ್ತು ಘಟಕ-೫೫ ಸಹಯೋಗದಲ್ಲಿ 'ನಶಾ ಮುಕ್ತ ಯುವ' ಸಂಕಲ್ಪ ಪ್ರತಿಜ್ಞೆ ವಿಧಿ ಕಾರ್ಯಕ್ರಮವನ್ನು ಆಯೋಜಿಸಲಾಯಿತು.

ಈ ಸಂದರ್ಭದಲ್ಲಿ ಮಾದಕ ದ್ರವ್ಯ ಸೇವನೆಯಿಂದ ಆರೋಗ್ಯಕ್ಕೆ ಉಂಟಾಗುವ ಪರಿಣಾಮಗಳ ಬಗ್ಗೆ ವಿದ್ಯಾರ್ಥಿಗಳಲ್ಲಿ ಜಾಗೃತಿ ಮೂಡಿಸಲಾಯಿತು.

ಆರೋಗ್ಯಕರ ಮತ್ತು ಜವಾಬ್ದಾರಿಯುತ ಜೀವನಶೈಲಿಯನ್ನು ಕಾಪಾಡಿಕೊಳ್ಳುವ ಮಹತ್ವವನ್ನು ಮತ್ತು ಮಾದಕ ದ್ರವ್ಯ ಮುಕ್ತ ಸಮಾಜವನ್ನು ನಿರ್ಮಿಸಲು ಪ್ರತಿಯೊಬ್ಬರೂ ಕೊಡುಗೆ ನೀಡುವಂತೆ ಜಾಗೃತಿ ಮೂಡಿಸಲಾಯಿತು.

ಈ ಸಂದರ್ಭದಲ್ಲಿ ಎನ್ ಎಸ್ ಎಸ್ ಕಾರ್ಯಕ್ರಮ ಅಧಿಕಾರಿಗಳಾದ ಡಾ. ಮಿಲನ್ ರಾಠೋಡ್, ಡಾ. ತರನ್ನುಮ್ ಜಬೀನ್ ಖಾನ್ ಮಹಾವಿದ್ಯಾಲಯದ ಇನ್ನಿತರ ಬೋಧಕ, ಬೋಧಕೇತರ ಸಿಬ್ಬಂದಿ ಉಪಸ್ಥಿತರಿದ್ದರು.

# ವೃಕ್ಷಥಾನ್ ಹೆರಿಟೇಜ್ ರನ್ ನೋಂದಣಿ ಪ್ರಕ್ರಿಯೆಗೆ ಚಾಲನೆ

## ಕೈಗಾರಿಕೆ, ಮೂಲಸೌಲಭ್ಯ ಅಭಿವೃದ್ಧಿ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಎಂ. ಬಿ. ಪಾಟೀಲ ಚಾಲನೆ

■ ಉದಯರಶ್ಮಿ ದಿನಪತ್ರಿಕೆ



ವಿಜಯಪುರ: ವೃಕ್ಷಥಾನ್ ಹೆರಿಟೇಜ್ ರನ್ ಈ ಬಾರಿ ಡಿಸೆಂಬರ್ 13 ರಂದು ರವಿವಾರ ನಡೆಯಲಿದ್ದು, ನೋಂದಣಿ ಪ್ರಕ್ರಿಯೆಗೆ ಕೈಗಾರಿಕೆ, ಮೂಲಸೌಲಭ್ಯ ಅಭಿವೃದ್ಧಿ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಎಂ. ಬಿ. ಪಾಟೀಲ ಶನಿವಾರ ಚಾಲನೆ ನೀಡಿದರು.

ನಗರದಲ್ಲಿರುವ ಜಿಲ್ಲಾ ಕ್ರೀಡಾಂಗಣದಲ್ಲಿ ಸಚಿವರು ವೃಕ್ಷಥಾನ್ ಹೆರಿಟೇಜ್– 2026 ರನ್ ಪೋಸ್ಟರ್ ಬಿಡುಗಡೆ ಮಾಡಿದರು. ಅಲ್ಲದೇ, ರೈತರಿಗೆ ಸಸಿ ವಿತರಿಸಿದರು. ಬಳಿಕ ಹೆರಿಟೇಜ್ ರನ್ ಓಟದಲ್ಲಿ ಪಾಲ್ಗೊಳ್ಳಲು ತಮ್ಮ ಹೆಸರನ್ನೂ ನೋಂದಣಿ ಮಾಡಿಸಿಕೊಂಡರು.

ಈ ಸಂದರ್ಭದಲ್ಲಿ ಮಾತನಾಡಿದ ಅವರು, ಸ್ವಾತಂತ್ರ್ಯದ ಸಂಭ್ರಮದಲ್ಲಿ ಹಸಿರಿನ ಹೆಜ್ಜೆ ಪ್ರತೀಕವಾಗಿ ವೃಕ್ಷಥಾನ್ ಹೆರಿಟೇಜ್ ರನ್–2026 ನೋಂದಣಿಗೆ ಚಾಲನೆ ನೀಡಿದ್ದೇನೆ. ಪಾರಂಪರಿಕ ಕಟ್ಟಡಗಳ ಸಂರಕ್ಷಣೆಗಾಗಿ, ಪಕ್ಷಿಗಳ ಉಳಿವಿಗಾಗಿ, ಮರ ಹಾಗೂ ಮಳೆಯ ಮಹತ್ವ ಸಾರುವ ಉದ್ದೇಶದಿಂದ "ಮರ, ಮಳೆಗಾಗಿ ಓಡಿ" ಎಂಬ ಕಳಕಳಿಯೊಂದಿಗೆ ಆಯೋಜಿಸಿರುವ ಈ ಓಟದಲ್ಲಿ ಸಹಸ್ರಾರು ಓಟಗಾರರು ಪಾಲ್ಗೊಳ್ಳಲಿದ್ದಾರೆ. ಡಿಸೆಂಬರ್ 13ರ ಭಾನುವಾರ ನಡೆಯುವ ಈ ಓಟದ ಹಬ್ಬಕ್ಕೆ ಇಂದಿನಿಂದಲೇ ತಯಾರಿ ಆರಂಭಿಸಿ, ಬಹುಮಾನ ನಿಮ್ಮದಾಗಿಸಿಕೊಳ್ಳಿ ಎಂದು ಹೇಳಿದರು.

ಈ ಸಂದರ್ಭದಲ್ಲಿ ಜಿಲ್ಲಾಧಿಕಾರಿ ಡಾ. ಆನಂದ ಕೆ. ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯ ನಿರ್ವಹಣಾಧಿಕಾರಿ ರಿಷಿ ಆನಂದ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಲಕ್ಷ್ಮಣ ನಿಂಬರಗಿ, ಮೇಯರ್ ಎಂ.ಎಸ್. ಕರಡಿ, ಉಪಮೇಯರ್ ಸುಮಿತ್ರಾ ಜಾಧವ, ವಿಜಯಪುರ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರಾದ ಡಾ. ಗಂಗಾಧರ ಸಂಬಣ್ಣಿ, ಕೌಶಲ್ಯ ಅಭಿವೃದ್ಧಿ ನಿಗಮದ ಅಧ್ಯಕ್ಷೆ ಕಾಂತಾ ನಾಯಕ, ಮಹಾನಗರ ಪಾಲಿಕೆ ಆಯುಕ್ತ ವಿಜಯಕುಮಾರ ಮೆಕ್ಕಳಕಿ, ಕೈಗಾರಿಕೆ ಸಚಿವರ ಸಾರ್ವಜನಿಕ ಸಂಪರ್ಕಾಧಿಕಾರಿ ಡಾ. ಮಹಾಂತೇಶ ಬಿರಾದಾರ, ವೃಕ್ಷಥಾನ್ ಸಂಚಾಲಕ ಮುರುಗೇಶ ಪಟ್ಟಣಶೆಟ್ಟಿ, ಹೆರಿಟೇಜ್ ರನ್ ಕೊರ್ ಕಮಿಟಿ ಪದಾಧಿಕಾರಿಗಳು, ವಿಜಯಪುರ ಸೈಕ್ಲಿಂಗ್ ಗ್ರುಪ್ ಪದಾಧಿಕಾರಿಗಳು ಸೇರಿದಂತೆ ಅನೇಕರು ಉಪಸ್ಥಿತ-ರಿದ್ದರು.

# ಜಾಲಗೇರಿ ಕೆರೆ ತುಂಬಲು ಶಾಶ್ವತ ಯೋಜನೆಗೆ ಬದ್ಧ

## ಮೂಲಸೌಲಭ್ಯ ಅಭಿವೃದ್ಧಿ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಎಂ.ಬಿ.ಪಾಟೀಲ ಭರವಸೆ

■ ಉದಯರಶ್ಮಿ ದಿನಪತ್ರಿಕೆ




ವಿಜಯಪುರ: ಜಾಲಗೇರಿ ಕೆರೆ ತುಂಬಲು ಸಣ್ಣ ನೀರಾವರಿ ಇಲಾಖೆಯ ಮೂಲಕ ಯೋಜನೆ ಶಾಶ್ವತ ಯೋಜನೆ ರೂಪಿಸಲಾಗುವುದು ಎಂದು ಕೈಗಾರಿಕೆ, ಮೂಲಸೌಲಭ್ಯ ಅಭಿವೃದ್ಧಿ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಎಂ. ಬಿ. ಪಾಟೀಲ ಹೇಳಿದ್ದಾರೆ.

ಶನಿವಾರ

ತಿಕೋಟಾ ತಾಲೂಕಿನ ಡೋಕಳೆವಾಡಿ ಗ್ರಾಮದಲ್ಲಿ ಸುಮಾರು ರೂ. 5 ಕೋ. ವೆಚ್ಚದಲ್ಲಿ ನಿರ್ಮಾಣವಾಗುತ್ತಿರುವ ಸೇತುವೆ ಮತ್ತು ಸಂಪರ್ಕ ರಸ್ತೆ ಸುಧಾರಣೆ ಕಾಮಗಾರಿಗೆ ಭೂಮಿ ಪೂಜೆ ನೆರವೇರಿಸಿ ಅವರು ಮಾತನಾಡಿದರು.

179 ಹಳ್ಳಗಳನ್ನು ತುಂಬುವುದರಿಂದ 1400 ಕಿ. ಮಿ. ನಷ್ಟು ಪ್ರದೇಶಕ್ಕೆ ನೀರಾವರಿಯ ಅನುಕೂಲವಾಗಲಿದೆ. ರೈತರಿಗೆ ಅಗತ್ಯವಿರುವರೆಗೆ ಕಾಲುವೆಗೆ ನೀರು ಹ-ರಿಸಲಾಗುವುದು. ಅಲ್ಲದೇ, ಜಿಲ್ಲೆಯಲ್ಲಿ ಕೈಗಾರಿಕೆಗಳನ್ನು ಪ್ರಾರಂಭಿಸುವ ಮೂಲಕ ಕನಿಷ್ಠ ಐದು ಸಾವಿರ ಯುವಕರಿಗೆ ಉದ್ಯೋಗ ಕೊಡಿಸುವ ಉದ್ದೇಶವಿದೆ.

ಸ್ಥಳೀಯ ಮೀನಾದೇವಿ ದೇವಸ್ಥಾನವನ್ನು ಅಭಿವೃದ್ಧಿ ಪಡಿಸಲಾಗುವುದು ಎಂದು ಅವರು ಹೇಳಿದರು.

ಮುಖಂಡ ಎಸ್. ಎಚ್. ನಾಡಗೌಡ ಮಾತನಾಡಿ, ಸಚಿವ ಎಂ. ಬಿ. ಪಾಟೀಲರ ಅವಿರತ ಪ್ರಯತ್ನದಿಂದ ಬೇರಾವ ಕ್ಷೇತ್ರದಲ್ಲೂ ಕಾಣದ ಅಭಿವೃದ್ಧಿ ಬಬಲೇಶ್ವರ ಮತಕ್ಷೇತ್ರದಲ್ಲಿ ಆಗುತ್ತಿದೆ. ವಾರದಲ್ಲಿ ಒಂದೆರಡಾದರೂ ಕಾಮಗಾರಿಗಳ ಉದ್ಘಾಟನೆ, ಶಂಕುಸ್ಥಾಪನೆ ಏನಾದರೂ ಕಾರ್ಯಕ್ರಮಗಳು ನಡೆಯುತ್ತಿವೆ. ಇವು ಸಚಿವರ ಬದ್ಧತೆಗೆ ಸಾಕ್ಷಿಯಾಗಿದೆ ಎಂದು ಹೇಳಿದರು.

ಈ ಸಂದರ್ಭದಲ್ಲಿ ಪೋಪಟ ಮಹಾರಾಜರು, ಮುಖಂಡರಾದ ವಿಠ್ಠಲ ಜಾಧವ, ಮಧುಕರ ಸಾಹುಕಾರ ಜಾಧವ, ಓಗೆಪ್ಪ ಗೋಪಣೆ, ರಾಜಶೇಖರ ಪವಾರ, ಗುರುಪಾದಗೌಡ ದಾಶ್ಯಾಳ, ಗೀತಾಂಜಲಿ ಪಾಟೀಲ, ಅಮಸಿದ್ದ ನಾಯಕ, ಲೋಕೋಪಯೋಗಿ ಇಲಾಖೆಯ ಎಇಇ ರವಿ ಪವಾರ, ನಾನಾ ಗ್ರಾಮಸ್ಥರು ಉಪಸ್ಥಿತರಿದ್ದರು.

# ಸ್ವಾತಂತ್ರ್ಯದ ಹಿಂದೆ ಸಾವಿರಾರು ವೀರರ ತ್ಯಾಗವಿದೆ : ಕಟಕಧೋಂಡ

■ ಉದಯರಶ್ಮಿ ದಿನಪತ್ರಿಕೆ




ಚಡಚಣ: ನಾವು ಬ್ರಿಟೀಷರ ಆಳ್ವಿಕೆಯಲ್ಲಿ ಸಿಲುಕಿ ಸಂಕಷ್ಟದಲ್ಲಿದ್ದಾಗ ನಮ್ಮ ಹಿರಿಯರು ಅನೇಕರು ಅವರ ವಿರುದ್ಧ ಹೋರಾಡಿದ ಫಲವಾಗಿ ನಮಗೆ ಸ್ವಾಂತ್ರ್ಯ ಸಿಕ್ಕಿದೆ ಎಂದು ನಾಗಠಾಣ ಶಾಸಕ ವಿಠ್ಠಲ ಕಟಕಧೋಂಡ ಅವರು ಹೇಳಿದರು.

ಸ್ಥಳೀಯ ಶ್ರೀ ಸಂಗಮೇಶ್ವರ ಕಾಲೇಜು ಆವರಣದಲ್ಲಿ ತಾಲೂಕಾಡಳಿತ ವತಿಯಿಂದ ನಡೆದ ಸ್ವಾತಂತ್ರ್ಯೋತ್ಸವದ ಅಧ್ಯಕ್ಷತೆಯನ್ನು ವಹಿಸಿ ಅವರು ಮಾತನಾಡಿದರು.

ಸ್ವಾತಂತ್ರ್ಯ ಹೋರಾಟಗಾರರ ತ್ಯಾಗ ಬಲಿದಾನವನ್ನು ನಾವು ಇಂದು ಸ್ಮರಿಸುತ್ತ ನಮ್ಮ ದೇಶದ ಒಳತಿಗಾಗಿ ನಾವು ಜಾತಿ, ಪಂಗಡ, ಮೇಲು, ಕೀಳು ಎಲ್ಲವನ್ನು ಮರೆತು ಎಲ್ಲರೂ ಒಗ್ಗಟ್ಟಾಗಿ ಶ್ರಮಿಸಬೇಕು ಎಂದು ಶಾಸಕರು ಹೇಳಿದರು.

ಧ್ವಜಾರೋಹಣ ನೆರವೇರಿ ತಹಶೀಲದಾರ ಸಂಜಯ ಇಂಗಳೆ ಮಾತನಾಡಿದರು. ಸಾಲೋಟಗಿಯ ಸಾಹಿತಿ ಗೀತಯೋಗಿ ಅವರು ಅತಿಥಿ ಉಪನ್ಯಾಸ ನೀಡಿದರು.

ಕಾರ್ಯಕ್ರಮದಲ್ಲಿ ಪತ್ರಕರ್ತ ಅಲ್ಲಮಪ್ರಭು ಕರ್ಜಗಿ, ಸಾಹಿತಿ ವಿದ್ಯಾ ಕಲ್ಯಾಣಶೆಟ್ಟಿ ಸೇರಿದಂತೆ ವಿವಿಧ ಕ್ಷೇತ್ರಗಳಲ್ಲಿ ಸಾಧನೆ ಮಾಡಿದ ಸಾಧಕರಿಗೆ ಸನ್ಮಾನಿಸಲಾಯಿತು.

ಧ್ವಜಾರೋಹಣದ ನಂತರ ಪೊಲೀಸ್ ಇಲಾಖೆ, ಗೃಹರಕ್ಷಕ ಇಲಾಖೆ ಹಾಗೂ ಎನ್.ಸಿ.ಸಿ. ವಿದ್ಯಾರ್ಥಿಗಳಿಂದ ಆಕರ್ಷಕ ಪಥಸಂಚಲನ ನಡೆಯಿತು.

ಕಾರ್ಯಕ್ರಮದಲ್ಲಿತಾ.ಪಂ.ಕಾರ್ಯನಿರ್ವಣಾಧಿಕಾರಿ ಅಶೋಕಕುಮಾರ ರಾಠೋಡ, ಬಿ.ಇ.ಓ. ನಾಗೇಂದ್ರಪ್ಪ ಎಚ್., ಸಿ.ಪಿ.ಐ. ಪರಶುರಾಮ ಮನಗೂಳಿ, ಪ.ಪಂ. ಮುಖ್ಯಾಧಿಕಾರಿ ಬಿ.ಕೆ. ತಾವಸೆ, ತೋಟಗಾರಿಕಾ ಇಲಾಖೆಯ ಅಧಿಕಾರಿ ಬಲರಾಮ ರಾಠೋಡ, ಸಿ.ಡಿ.ಪಿ.ಓ. ಸಾಹೇಬಗೌಡ ಜುಂಜರವಾಡ, ಪ.ಪಂ. ಅಧ್ಯಕ್ಷ ಮಲ್ಲಿಕಾರ್ಜುನ ಧೋತ್ರೆ, ಪ.ಪಂ. ಸರ್ವ ಸದಸ್ಯರು, ಎಲ್ಲ ಇಲಾಖೆಯ ಅಧಿಕಾರಿಗಳು ಹಾಗೂ ಶಾಲಾ ಮಕ್ಕಳು ಸೇ-ರಿದಂತೆ ಸಾರ್ವಜನಿಕರು ಇದ್ದರು.

# ದೇಶದ ಅಭಿವೃದ್ಧಿ ಹಾಗೂ ಜನಕಲ್ಯಾಣಕ್ಕೆ ಸಂಕಲ್ಪ ಮಾಡಬೇಕು

■ ಉದಯರಶ್ಮಿ ದಿನಪತ್ರಿಕೆ



ವಿಜಯಪುರ: ದೇಶದ ಸ್ವಾತಂತ್ರ್ಯಕ್ಕಾಗಿ ಹೋರಾಡಿದ ಅಸಂಖ್ಯಾತ ವೀರರ ತ್ಯಾಗ, ಬಲಿದಾನ ಹಾಗೂ ಹೋರಾಟದ ಫಲವಾಗಿ ದೊರೆತ ಸ್ವಾತಂತ್ರ್ಯ ವನ್ನು ಪ್ರತಿಯೊಬ್ಬ ಭಾರತೀಯರೂ ಹೆಮ್ಮೆಯಿಂದ ಸ್ಮರಿಸುವುದರ ಜೊತೆಗೆ, ದೇಶದ ಅಭಿವೃದ್ಧಿ ಹಾಗೂ ಜನಕಲ್ಯಾಣಕ್ಕೆ ತಮ್ಮದೇ ಆದ ಕೊಡುಗೆ ನೀಡುವ ಸಂಕಲ್ಪ ಮಾಡಬೇಕು ಎಂದು ಜಿಲ್ಲಾ ಪಂಚಾಯತಿಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ರಿಷಿ ಆನಂದ ಅವರು ಹೇಳಿದರು.

80ನೇ ಸ್ವಾತಂತ್ರೋತ್ಸವದ ಅಂಗವಾಗಿ ಶನಿವಾರ ಜಿಲ್ಲಾ ಪಂಚಾಯತಿ ಆವರಣದಲ್ಲಿ ಧ್ವಜಾರೋಹಣ ನೆರವೇರಿಸಿ ಮಾತನಾಡಿದ ಅವರು, ಅಸಂಖ್ಯಾತ ಹೋರಾಟಗಾರರು ತಮ್ಮ ಜೀವನವನ್ನೇ ದೇಶಕ್ಕಾಗಿ ಮುಡಿಪಾಗಿಟ್ಟು, ಅವರ ತ್ಯಾಗ, ಬಲಿದಾನ ಹಾಗೂ ಹೋರಾಟದ ಫಲವಾಗಿ ನಾವು ಇಂದು ಸ್ವತಂತ್ರ ಭಾರತದಲ್ಲಿ ಬದುಕುತ್ತಿದ್ದೇವೆ. ಆದ್ದರಿಂದ ಸ್ವಾತಂತ್ರ್ಯದ ಮಹತ್ವವನ್ನು ಅರಿತು, ಸ್ವಾತಂತ್ರ್ಯ ಹೋರಾಟಗಾರರಿಗೆ ಗೌರವ ಹಾಗೂ ನಮನ ಸಲ್ಲಿಸುವುದು ನಮ್ಮೆಲ್ಲರ ಕರ್ತವ್ಯವಾಗಿದೆ ಎಂದು ಅವರು ಹೇಳಿದರು.

ಭಾರತ ವಿಶ್ವದ ಅತಿದೊಡ್ಡ ಪ್ರಜಾಪ್ರಭುತ್ವ ರಾಷ್ಟ್ರವಾಗಿದ್ದು, ಜನಕಲ್ಯಾಣವೇ ಆಡಳಿತದ ಪ್ರಮುಖ ಉದ್ದೇಶವಾಗಿದೆ. ಹೀಗಾಗಿ ಪ್ರತಿಯೊಬ್ಬ ನಾಗರಿಕರು ಹಾಗೂ ಸರ್ಕಾರಿ ಅಧಿಕಾರಿ, ಸಿಬ್ಬಂದಿ ತಮ್ಮ ಜವಾಬ್ದಾರಿಯನ್ನು ಅರಿತು ಜನಸೇವೆಗೆ ಬದ್ಧರಾಗಬೇಕು. ಸ್ವಾತಂತ್ರ್ಯ ನಮಗೆ ಹಕ್ಕುಗಳನ್ನು ನೀಡಿರುವಂತೆಯೇ, ದೇಶದ ಅಭಿವೃದ್ಧಿಯಲ್ಲಿ ಪಾಲ್ಗೊಳ್ಳುವ ಜವಾಬ್ದಾರಿಯನ್ನೂ ನೀಡಿದೆ ಎಂದರು.

ಕಾರ್ಯಕ್ರಮದಲ್ಲಿಜಿಲ್ಲಾಗ್ಯಾರಂಟಿಯೋಜನೆಗಳ ಅನುಷ್ಠಾನ ಸಮಿತಿಯ ಅಧ್ಯಕ್ಷರಾದ ವಸಂತ ಸಿದ್ರಾಮಪ್ಪ ಹೊನಮೊಡೆ, ಉಪಾಧ್ಯಕ್ಷರಾದ ಶ್ರೀಮತಿ ಮಹಾದೇವಿ ಅಶೋಕ ಗೋಕಾಕ, ಜಿಪಂ ಉಪಕಾರ್ಯದರ್ಶಿ ಪ್ರಕಾಶ ವಡ್ಡರ, ಮುಖ್ಯ ಯೋಜನಾಧಿಕಾರಿ ಸಿ.ಬಿ. ಕುಂಬಾರ, ಮುಖ್ಯ ಲೆಕ್ಕಾಧಿಕಾರಿ ರಾಮಣ್ಣ ಅಥಣಿ, ಜಿಲ್ಲಾ ಮಾಹಿತಿ ಸೂಚನಾ ಅಧಿಕಾರಿ ಶಿವಾನಂದ ಗೂಗವಾಡ, ಸೇ-ರಿದಂತೆ ಜಿಲ್ಲಾ ಪಂಚಾಯತಿಯ ಎಲ್ಲ ಅಧಿಕಾರಿ, ಸಿಬ್ಬಂದಿ ಉಪಸ್ಥಿತರಿದ್ದರು.

**Printed by:** AVINASH BIDARI, **Published and owned by:** SHAILA INDUSHEKHAR MANUR **Printed at:** ARUN OFFSET PRINTERS,No.23, Sanjaygandhi Nagar, Indi Road, Vijayapura - 586101, Vijayapura Dist., Karnataka. **Published at:** At No.14, Silk City, Near Varasiddi Vinayaka Temple, Atalatti Link Road, Vijayapura -586102, Vijayapura Dist., Karnataka..**Editor :** INDUSHEKHAR MANUR